ಮಂಗಳವಾರ 02.12.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 113
Digital Varthe Kannada Daily
Volume 01 - Issue 113
Tuesday 02.12.2025
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡ ದಿನಪತ್ರಿಕೆ
ಕನ್ನಡಿಗರ ಶಕ್ತಿ

DIGITAL VARTHE
digitalvarthe@gmail.com
www.digitalvarthe.com

## ಟೆಂಪೋ ಪಲ್ಟಿಯಾಗಿ ಐವರು ಕಾರ್ಮಿಕರ ದುರ್ಮರಣ



**ಉಡುಪಿ:** ಕಾಪು ತಾಲೂಕಿನ ಕೋತಲಕಟ್ಟೆ ರಾಷ್ಟ್ರೀಯ ಹೆದ್ದಾರಿಯಲ್ಲಿ ಇಂದು ಭೀಕರ ರಸ್ತೆ ಅಪಘಾತ ಸಂಭವಿಸಿದ್ದು, ಈ ಅಪಘಾತದಲ್ಲಿ ಐದು ಮಂದಿ ಕಾರ್ಮಿಕರು ಸಾವನ್ನಪ್ಪಿದ್ದಾರೆ. ಇನ್ನೂ ಹಲವರು ಗಂಭೀರ ಗಾಯಗೊಂಡಿದ್ದು, ಉಡುಪಿ ನಗರದ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಮೃತರಲ್ಲಿ ರಾಜೇಶ್ ಕುಮಾರ್ (35), ಸತೀಶ್ ಯಾದವ್ (28), ರಾಕೇಶ್ ಸಿಂಗ್ (31), ಅಜಯ್ ಪಾಲ್ (29) ಮತ್ತು ಮನೀಶ್ ಕುಮಾರ್ (26) ಎಂದು ಗುರುತಿಸಲಾಗಿದೆ. ಇವರೆಲ್ಲರೂ ಉತ್ತರ ಪ್ರದೇಶದ ಬಲಿಯಾ, ಗಾಜೀಪುರ ಮತ್ತು ಜೌನ್‌ಪುರ ಜಿಲ್ಲೆಗಳ ಮೂಲನಿವಾಸಿಗಳಾಗಿದ್ದಾರೆ.

**ಘಟನೆಯ ವಿವರ**

ಕೋತಲಕಟ್ಟೆ ಹತ್ತಿರದ ರಾಷ್ಟ್ರೀಯ ಹೆದ್ದಾರಿಯಲ್ಲಿ ಒಂದು ಟೆಂಪೋ ನಿಯಂತ್ರಣ ತಪ್ಪಿ ಪಲ್ಟಿಯಾಗಿ ಭೀಕರ ಅವಘಡ ಸಂಭವಿಸಿದೆ. ಟೆಂಪೋದಲ್ಲಿ ಒಟ್ಟು 12 ಮಂದಿ ಕಾರ್ಮಿಕರು ಪ್ರಯಾಣಿಸುತ್ತಿದ್ದರು. ಇವರು ಎಲ್ಲರೂ ಉತ್ತರ ಪ್ರದೇಶ ಮೂಲದವರು ಆಗಿದ್ದಾರೆ.

ಕಾಪುವಿನಿಂದ ಉಡುಪಿ ಕಡೆ ಸಾಗುತ್ತಿದ್ದ ಟೆಂಪೋ, ವೇಗವಾಗಿ ಬಂದು ರಾಷ್ಟ್ರೀಯ ಹೆದ್ದಾರಿಯಲ್ಲಿ ಬರುತ್ತಿದ್ದಾಗ ಚಾಲಕನ ನಿಯಂತ್ರಣ ತಪ್ಪಿ ರಸ್ತೆ ಬದಿಯಲ್ಲಿ ಪಲ್ಟಿಯಾಯಿತು. ಅವಘಡ ಸಂಭವಿಸಿದ ತಕ್ಷಣ, ಸ್ಥಳದಲ್ಲಿದ್ದ ಇಬ್ಬರು ಕಾರ್ಮಿಕರು ಗಂಭೀರವಾಗಿ ಗಾಯಗೊಂಡಿದ್ದರಿಂದ ಸ್ಥಳದಲ್ಲೇ ಮೃತಪಟ್ಟಿದ್ದಾರೆ.

ಸ್ಥಳಕ್ಕೆ ಧಾವಿಸಿದ ಕಾಪು ಪೊಲೀಸ್ ಸಿಬ್ಬಂದಿ ಮತ್ತು ಸ್ಥಳೀಯರು ಗಾಯಗೊಂಡವರನ್ನು ಸಮೀಪದ ಆಸ್ಪತ್ರೆಗೆ ಸಾಗಿಸಿದ್ದಾರೆ. ಆದರೆ ಅಲ್ಲಿ ಚಿಕಿತ್ಸೆ ಪಡೆಯುತ್ತಿರುವ ಮೂವರು ಕಾರ್ಮಿಕರು ಗಂಭೀರ ಗಾಯಗಳಾಗಿದ್ದರಿಂದ ಚಿಕಿತ್ಸೆಗೆ ಸ್ಪಂದಿಸದೇ ಮೃತಪಟ್ಟಿದ್ದಾರೆ . ಇನ್ನೂ ಉಳಿದ ಕಾರ್ಮಿಕರಿಗೂ ತೀವ್ರ ಗಾಯಗಳಾಗಿದ್ದು, ಅವರಿಗೆ ತುರ್ತು ಚಿಕಿತ್ಸೆ ನೀಡಲಾಗುತ್ತಿದೆ.

## ಪತ್ನಿಯ ಕೊಂದು ಶವದ ಜತೆ ಸೆಲ್ಫಿ ತೆಗೆದು ವಾಟ್ಸಾಪ್ ಸ್ಟೇಟಸ್ ಹಾಕಿದ್ದ ಪತಿ ಅರೆಸ್ಟ್

**ಚೆನ್ನೈ:** ವ್ಯಕ್ತಿಯೊಬ್ಬ ಪತ್ನಿಯ ಕೊಲೆ(Murder) ಮಾಡಿ ಶವದ ಜತೆ ಸೆಲ್ಫಿ ತೆಗೆದು ವಾಟ್ಸಾಪ್‌ನಲ್ಲಿ ಸ್ಟೇಟಸ್ ಹಾಕಿದ್ದ ಪತಿಯನ್ನು ಪೊಲೀಸರು ಬಂಧಿಸಿದ್ದಾರೆ. ತಮಿಳುನಾಡಿನಲ್ಲಿ ಮಹಿಳೆಯರ ಮೇಲಿನ ಅಪರಾಧ ಪ್ರಕರಣಗಳು ಹೆಚ್ಚುತ್ತಿದ್ದು, ತೀವ್ರ ಕಳವಳ ಹುಟ್ಟುಹಾಕಿದೆ. ಕೊಯಮತ್ತೂರಿನಲ್ಲಿ ಖಾಸಗಿ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದ ಶ್ರೀಪ್ರಿಯಾ, ತನ್ನ ಪತಿ ಬಾಲಮುರುಗನ್ ಅವರಿಂದ ಬೇರ್ಪಟ್ಟಿದ್ದರು. ಅವರು ಭಾನುವಾರ ಮಧ್ಯಾಹ್ನ ಆಕೆಯ ಪತಿ ಬಟ್ಟೆಯಲ್ಲಿ ಅಡಗಿಸಿಕೊಂಡು ಹಾಸ್ಟೆಲ್‌ಗೆ ಬಂದಿದ್ದ.



ಭೇಟಿಯಾದ ಸ್ವಲ್ಪ ಸಮಯದ ನಂತರ ಇಬ್ಬರ ನಡುವೆ ವಾಗ್ವಾದ ನಡೆಯಿತು. ಹಠಾತ್ ದಾಳಿಯಲ್ಲಿ, ಬಾಲಮುರುಗನ್ ಕತ್ತಿ ಹೊರತೆಗೆದು ಹಾಸ್ಟೆಲ್‌ನಲ್ಲಿ ಆಕೆಯನ್ನು ಕಡಿದು ಕೊಂದಿದ್ದಾನೆ ಎಂದು ಆರೋಪಿಸಲಾಗಿದೆ. ಆಘಾತಕಾರಿ ಸಂಗತಿಯೆಂದರೆ, ನಂತರ ಅವನು ಆಕೆಯ ದೇಹದೊಂದಿಗೆ ಸೆಲ್ಫಿ ತೆಗೆದುಕೊಂಡು ಅದನ್ನು ತನ್ನ ವಾಟ್ಸಾಪ್ ಸ್ಟೇಟಸ್ ಆಗಿ ಅಪ್‌ಲೋಡ್ ಮಾಡಿ, ಆಕೆ ತನಗೆ ದ್ರೋಹ ಮಾಡಿದ್ದಾಳೆಂದು ಹೇಳಿಕೊಂಡಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ.

ದಾಳಿ ನಡೆಯುತ್ತಿದ್ದಂತೆ ಹಾಸ್ಟೆಲ್ ನಿವಾಸಿಗಳು ಭಯಭೀತರಾಗಿ ಹೊರಗೆ ಓಡಿಹೋದರು. ಬಾಲಮುರುಗನ್ ಸ್ಥಳದಲ್ಲೇ ಇದ್ದು ಪೊಲೀಸರು ಬರುವವರೆಗೂ ಕಾಯುತ್ತಿದ್ದ.ಆತನನ್ನು ಸ್ಥಳದಲ್ಲೇ ಬಂಧಿಸಲಾಯಿತು ಮತ್ತು ಆಯುಧವನ್ನು ವಶಪಡಿಸಿಕೊಳ್ಳಲಾಯಿತು. ಪ್ರಾಥಮಿಕ ತನಿಖೆಗಳು ಅವರು ತಮ್ಮ ಪತ್ನಿಗೆ ಬೇರೊಬ್ಬ ಪುರುಷನೊಂದಿಗೆ ಸಂಬಂಧವಿದೆ ಎಂದು ಶಂಕಿಸಿರುವುದಾಗಿ ಸೂಚಿಸುತ್ತವೆ.

ಈ ಕೊಲೆಯು ತಮಿಳುನಾಡಿನಲ್ಲಿ ಮಹಿಳೆಯರ ಸುರಕ್ಷತೆಯ ಕುರಿತಾದ ರಾಜಕೀಯ ಚರ್ಚೆಯನ್ನು ತೀವ್ರಗೊಳಿಸಿದೆ. ಆಡಳಿತಾರೂಢ ಡಿಎಂಕೆ ಸರ್ಕಾರವು ಕಾನೂನು ಮತ್ತು ಸುವ್ಯವಸ್ಥೆ ಕುಸಿಯುತ್ತಿದೆ ಮತ್ತು ಮಹಿಳೆಯರನ್ನು ರಕ್ಷಿಸುವಲ್ಲಿ ವಿಫಲವಾಗಿದೆ ಎಂದು ಪ್ರತಿಪಕ್ಷಗಳು ಆರೋಪಿಸುತ್ತಿವೆ, ಇದು ಕ್ರೂರ ಅಪರಾಧಗಳು ಮತ್ತು ಲೈಂಗಿಕ ಅಪರಾಧಗಳ ಹೆಚ್ಚಳವನ್ನು ಸೂಚಿಸುತ್ತದೆ. ಡಿಎಂಕೆ ಸರ್ಕಾರ ಮತ್ತು ರಾಜ್ಯ ಪೊಲೀಸರು ಇವು ವೈಯಕ್ತಿಕ ದ್ವೇಷದಿಂದ ನಡೆಸಲ್ಪಟ್ಟ ಘಟನೆಗಳೆಂದು ಸಮರ್ಥಿಸಿಕೊಳ್ಳುತ್ತಿದ್ದಾರೆ.

## ಮಾದಿಗ ಯುವ ಪ್ರತಿಭೆ ಸಮಾಜದ ಮುಖ್ಯವಾಹಿನಿಗೆ ಬರಲು ಸಂಘಟಿತರಾಗಿ :- ಜಿ.ಮಾರಪ್ಪ ಕರೆ



**ದೇವನಹಳ್ಳಿ:-** ಮಾದಿಗ ಸಮುದಾಯದ ಯುವ ಪೀಳಿಗೆ ಸಮಾಜದ ಮುಖ್ಯವಾಹಿನಿಗೆ ಬರಲು ಸಂಘಟಿತರಾಗುವಂತೆ ಕರ್ನಾಟಕ ಮಾದಿಗ ದಂಡೋರ ಮೀಸಲಾತಿ ಹೋರಾಟ ಸಮಿತಿ ಜಿಲ್ಲಾಧ್ಯಕ್ಷರಾದ ಜಿ.ಮಾರಪ್ಪ ಕರೆ ನೀಡಿದರು.

ದೇವನಹಳ್ಳಿ ಪಟ್ಟಣದ ಪ್ರವಾಸಿ ಮಂದಿರದಲ್ಲಿ ನಡೆದ ಮಾದಿಗ ಯುವ ಮುಖಂಡರು ಹಾಗೂ ಕಾರ್ಯ ಕರ್ತರ ಸಭೆಯಲ್ಲಿ ಭಾಗವಹಿಸಿ ಮಾತನಾ ಡಿದ ಅವರು, ಗ್ರಾಮೀಣ ಭಾಗದಲ್ಲಿ ಮಾದಿಗ ಸಮುದಾಯದ ಯುವ ಪೀಳಿಗೆ ನಾನಾ ವ್ಯಸನ ಗಳಿಂದ ಶಿಕ್ಷಣ, ಉದ್ಯೋಗ, ರಾಜಕೀಯ ಕ್ಷೇತ್ರದಲ್ಲಿ ಅವಕಾಶ ವಂಚತನೆಯಿಂದಾಗಿ ಮುಂದುವರೆದ ಸಮುದಾಯಗಳ ಮಧ್ಯ ನಮ್ಮೆಲ್ಲಾ ಸಮುಧಾಯ ಗಳ ಬೆಳವಣಿಗೆ ಕಷ್ಟ ಸಾಧ್ಯವಾಗಿದ್ದು ಸಮಾಜದ ಮುಖ್ಯವಾಹಿನಿಗೆ ಒಳ್ಳೆಯ ಪ್ರತಿಭೆಗಳು ಗುರುತಿ ಸುವ ಸದುದ್ದೇಶದಿಂದ ಮಾದಿಗ ಸಮುದಾಯದ ಯುವಕರು ಸಂಘಟಿತರಾಗಬೇಕು.

ಸಮಾಜದ ಅಂಕು, ಡೊಂಕುಗಳನ್ನು ತಿದ್ದಿ ಉತ್ತಮ ಸಮಾಜ ನಿರ್ಮಾಣದ ಶಕ್ತಿ ಮಾಧ್ಯಮದ ಜವಾಬ್ದಾರಿಯಾಗಿದೆ. ಹಾಗಾಗಿಯೇ ನ್ಯಾಯಾಂಗ ಕಾರ್ಯಾಂಗ, ಶಾಸಕಾಂಗದ ಜೊತೆ ನಾಲ್ಕನೇ ಅಂಗ ಮಾಧ್ಯಮ ಕ್ಷೇತ್ರವಾಗಿದೆ ಪಾರದರ್ಶಕ ಆಡಳಿತಕ್ಕೆ ದಿಕ್ಸೂಚಿಯೇ ಮಾಧ್ಯಮ ರಂಗವಾಗಿದೆ.

ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದ ಬೆಂಗಳೂರು ಗ್ರಾಮಾಂತರ ಜಿಲ್ಲಾ ಘಟಕದ ಕಾರ್ಯಕಾರಿ ಸಮಿತಿ ಸ್ಥಾನಕ್ಕೆ ಮಾದಿಗ ಜನಾಂಗದ ಯುವ ಪತ್ರಕರ್ತರಾದ ಜಗದೀಶ ಅವರು ಮಾಧ್ಯಮದವರ ಚುನಾವಣೆಯಲ್ಲಿ ಹೆಚ್ಚಿನ ಮತ ಗಳ ಅಂತರದಲ್ಲಿ ಗೆದ್ದಿರುವ ಜಗದೀಶ ಅವರಿಗೆ ಶುಭ ಹಾರೈಸಲಾಗಿದೆ ಎಂದರು.

ಈ ಸಂದರ್ಭದಲ್ಲಿ ಕರ್ನಾಟಕ ಮಾದಿಗ ದಂಡೋರ ಮೀಸಲಾತಿ ಹೋರಾಟ ಸಮಿತಿ ತಾಲೂಕು ಅಧ್ಯಕ್ಷ ಅಣ್ಣೇಶ್ವರ ವೆಂಕಟೇಶ್, ಹಿರಿಯ ಮುಖಂಡ ಕೃಷ್ಣ ಮೂರ್ತಿ, ಬುಳ್ಳಹಳ್ಳಿ ಮುನಿರಾಜು, ಸಾವಕನಹಳ್ಳಿ ಶ್ರೀನಿವಾಸ್, ಸೋಲೂರು ನಾಗರಾಜು, ಭೂವನ ಹಳ್ಳಿ ಆನಂದ್, ಮಧುಸೂದನ್, ಮುನಿರಾಜು, ಮಂಜುನಾಥ್ ಮುನಿಯಪ್ಪ, ಲಿಂಗ ಸುಧಾಕರ, ಚಂದ್ರಶೇಖರ್ ರೋಹಿತ್, ಶ್ರೀನಿವಾಸ್ ಸೇರಿದಂತೆ ಅನೇಕರು ಹಾಜರಿದ್ದರು.

## ಪುಟ್ಟ ಮಗುವಿಗೆ ಮನಬಂದಂತೆ ಥಳಿಸಿದ ಕೇರ್‌ಟೇಕರ್



**ಹೈದರಾಬಾದ್:** ಜೀಡಿಮೆಟ್ಲಾ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿರುವ ಒಂದು ಅತಿದಾರುಣ ಘಟನೆ ಸ್ಥಳೀಯರಲ್ಲಿ ಆಕ್ರೋಶ ಮೂಡಿಸಿದೆ. ಇಲ್ಲಿನ ಪೂರ್ಣಿಮಾ ಶಾಲೆಯ ನರ್ಸರಿ ವಿಭಾಗದಲ್ಲಿ ಓದುತ್ತಿರುವ 4 ವರ್ಷದ ಪುಟ್ಟ ಬಾಲಕಿಯನ್ನು ಮಹಿಳಾ ಆಯಾ (ದಾದಿ) ಒಬ್ಬರು ನಿರ್ದಯವಾಗಿ ಥಳಿಸಿರುವ ವಿಷಯ ಬಹಿರಂಗವಾಗಿದೆ. ಶಾಲೆಯೊಳಗೆ ನಡೆದ ಈ ಕೃತ್ಯವನ್ನು ಪಕ್ಕದ ಕಟ್ಟಡದಲ್ಲಿ ವಾಸಿಸುವ ಯುವಕನೊಬ್ಬ ತನ್ನ ಮೊಬೈಲ್ ಫೋನ್‌ನಲ್ಲಿ ವಿಡಿಯೋ ರೂಪದಲ್ಲಿ ದಾಖಲಿಸಿದ್ದು, ಆ ದೃಶ್ಯಗಳು ಸಾಮಾಜಿಕ ಜಾಲತಾಣಗಳಲ್ಲಿ ವೇಗವಾಗಿ ವೈರಲ್ ಆಗಿವೆ.

ವಿಡಿಯೋದಲ್ಲಿ ಕಾಣುವಂತೆ, ಮಹಿಳಾ ಕೇರ್‌ಟೇಕರ್ ಲಕ್ಷ್ಮಿ ಪುಟ್ಟ ಮಗಳನ್ನು ಉದ್ದೇಶಪೂರ್ವಕವಾಗಿ ಮತ್ತೆ ಮತ್ತೆ ಥಳಿಸುತ್ತಿರುವುದು ಕಂಡುಬಂದಿದೆ. ಈ ದೌರ್ಜನ್ಯದಿಂದ ಮಗು ಭಯಭೀತಳಾಗಿ ಮನಸ್ಸಿಗೆ ಹೊಡೆತ ತಗುಲಿದಂತಾಗಿರುವುದಲ್ಲದೆ

ಜ್ವರದಿಂದಲೂ ಬಳಲತೊಡಗಿದ್ದಳು. ತಕ್ಷಣವೇ ಕುಟುಂಬದವರು ಆಕೆಯನ್ನು ಸ್ಥಳೀಯ ಆಸ್ಪತ್ರೆಗೆ ಕರೆದೊಯ್ದು ಚಿಕಿತ್ಸೆ ಆರಂಭಿಸಿದ್ದಾರೆ.

ವಿಡಿಯೋವನ್ನು ಸೆರೆಹಿಡಿದಿದ್ದ ಹುಡುಗ ತಕ್ಷಣ ಅದನ್ನು ಪೊಲೀಸರಿಗೆ ತೋರಿಸಿದ್ದು, ಘಟನೆ ಬಗ್ಗೆ ವಿಚಾರಣೆ ನಡೆಸಿದ ಜೀಡಿಮೆಟ್ಲಾ ಪೊಲೀಸರು ಕೇರ್‌ಟೇಕರ್ ಲಕ್ಷ್ಮಿ ವಿರುದ್ಧ ಪ್ರಕರಣ ದಾಖಲಿಸಿದ್ದಾರೆ. ನಂತರ ಅವರನ್ನು ವಶಕ್ಕೆ ಪಡೆದು, ವಿಷಯದ ಕುರಿತು ಇನ್ನಷ್ಟು ತನಿಖೆ ನಡೆಸುತ್ತಿದ್ದಾರೆ.

ಈ ನಡುವೆ, ಪೀಡನೆಯಿಂದ ಬಳಲುತ್ತಿರುವ ಬಾಲಕಿಯ ಪೋಷಕರು ತಮ್ಮ ಮಗಳ ಮೇಲೆ ಕೇರ್‌ಟೇಕರ್ ಉದ್ದೇಶಪೂರ್ವಕವಾಗಿ ಹಲ್ಲೆ ನಡೆಸಿದ್ದಾಳೆ ಎಂದು ಗಂಭೀರ ಆರೋಪ ಮಾಡಿದ್ದಾರೆ. ಅವರ ಪ್ರಕಾರ, ಶಾಲೆಯೊಳಗಿನ ಸುರಕ್ಷತೆ ಮತ್ತು ಮಕ್ಕಳ ಜತೆಗಿನ ವರ್ತನೆಯ ಬಗ್ಗೆ ಗಂಭೀರ ಪ್ರಶ್ನೆಗಳು ಉದ್ಭವಿಸಿವೆ. ಪೊಲೀಸರು ಈಗ ಎಲ್ಲಾ ದೃಶ್ಯಾಧಾರ ಮತ್ತು ಸಾಕ್ಷಿಗಳನ್ನು ಪರಿಶೀಲಿಸುತ್ತಿದ್ದು, ಪ್ರಕರಣಕ್ಕೆ ಸಂಬಂಧಿಸಿದಂತೆ ಮುಂದಿನ ಕ್ರಮ ಕೈಗೊಳ್ಳುತ್ತಿದ್ದಾರೆ.

## ಎರಡು ಬಸ್‌ಗಳ ನಡುವೆ ಮುಖಾಮುಖಿ ಡಿಕ್ಕಿ ; 11 ಮಂದಿ ಸ್ಥಳದಲ್ಲೇ ಸಾವು



**ಚೆನ್ನೈ:** ತಮಿಳುನಾಡಿನ ದಕ್ಷಿಣ ಶಿವಗಂಗಾ ಜಿಲ್ಲೆಯ ತಿರುಪತ್ತೂರು ಸಮೀಪದ ರಾಷ್ಟ್ರೀಯ ಹೆದ್ದಾರಿಯಲ್ಲಿ ಭಾನುವಾರ ಸಂಜೆ ಎರಡು ತಮಿಳುನಾಡು ಸರ್ಕಾರಿ ರಾಜ್ಯ ಸಾರಿಗೆ ಬಸ್‌ಗಳು ಮುಖಾಮುಖಿ ಡಿಕ್ಕಿ ಹೊಡೆದಿವೆ. ಇದರ ಪರಿಣಾಮ ಕನಿಷ್ಠ 11 ಜನರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ ಮತ್ತು 40ಕ್ಕೂ ಹೆಚ್ಚು ಪ್ರಯಾಣಿಕರು ಗಂಭೀರವಾಗಿ ಗಾಯಗೊಂಡಿದ್ದಾರೆ.

ತಿರುಪತ್ತೂರು-ಕಳಯಾರ್ಕೋವಿಲ್ ರಸ್ತೆಯ ಕರಿಸಲ್ಕುಳಂ ಗ್ರಾಮದ ಬಳಿ ಸಂಜೆ ಸುಮಾರಿಗೆ ಈ ಅಪಘಾತ ಸಂಭವಿಸಿದೆ. ಒಂದು ಬಸ್ ಮಧುರೈನಿಂದ ಕಾರೈಕುಡಿಗೆ ತೆರಳುತ್ತಿದ್ದರೆ, ಮತ್ತೊಂದು ಬಸ್ ಕಾರೈಕುಡಿಯಿಂದ ಮಧುರೈ ಕಡೆಗೆ ಬರುತ್ತಿತ್ತು. ಚಾಲಕನ ನಿಯಂತ್ರಣ ತಪ್ಪಿ ಎದುರಿಗೆ ಬಂದ ಪರಿಣಾಮ ಎರಡೂ ಬಸ್‌ಗಳು ಡಿಕ್ಕಿಹೊಡೆದವು. ಡಿಕ್ಕಿಯ ಆಘಾತದಿಂದ ಎರಡೂ ಬಸ್‌ಗಳ ಮುಂಭಾಗ ಜಖಂ ಜಖಂ ಆಗಿದ್ದು, ಕೆಲವು ಸೀಟುಗಳು ಪೂರ್ತಿ ಒಡೆದು ಹೋಗಿದ್ದವು.

ಈ ಅಪಘಾತದಲ್ಲಿ 10 ಜನರು ಸ್ಥಳದಲ್ಲೇ ಮೃತಪಟ್ಟಿದ್ದರು. ಆದರೆ ರಕ್ಷಣಾ ಕಾರ್ಯದ ನಂತರ ಮತ್ತೊಬ್ಬರು ಆಸ್ಪತ್ರೆಗೆ ತೆರಳುವ ಮಾರ್ಗದಲ್ಲಿ ಮೃತಪಟ್ಟಿದ್ದು, ಒಟ್ಟು ಸಾವಿನ ಸಂಖ್ಯೆ 11ಕ್ಕೆ ಏರಿಕೆಯಾಗಿದೆ ಎಂದು ಶಿವಗಂಗಾ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ದೃಢಪಡಿಸಿದ್ದಾರೆ. ಮೃತರಲ್ಲಿ ಮಹಿಳೆಯರು ಮತ್ತು ಮಕ್ಕಳೂ ಸೇರಿದ್ದಾರೆ.

ಗಾಯಾಳುಗಳ ಪೈಕಿ 15ಕ್ಕೂ ಹೆಚ್ಚು ಮಂದಿ ಸ್ಥಿತಿ ಗಂಭೀರವಾಗಿದ್ದು, ಅವರನ್ನು ಸಿವಗಂಗಾ ಸರ್ಕಾರಿ ವೈದ್ಯಕೀಯ ಕಾಲೇಜು ಆಸ್ಪತ್ರೆ ಹಾಗೂ ಮಧುರೈ ರಾಜಾಜಿ ಆಸ್ಪತ್ರೆಗೆ ತುರ್ತಾಗಿ ಸ್ಥಳಾಂತರಿಸಲಾಗಿದೆ. ಉಳಿದವರಿಗೆ ತಿರುಪತ್ತೂರು ಮತ್ತು ಕಳಯಾರ್ಕೋವಿಲ್ ಆಸ್ಪತ್ರೆಗಳಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.

ಶಿವಗಂಗಾ ಜಿಲ್ಲಾಧಿಕಾರಿ, ಎಸ್‌ಪಿ, ಡಿವೈಎಸ್‌ಪಿ, ಅಗ್ನಿಶಾಮಕ ದಳ ಸ್ಥಳಕ್ಕೆ ಧಾವಿಸಿದವು. ಎರಡೂ ಬಸ್‌ಗಳು ಜನದಟ್ಟಣೆಯಿಂದ ತುಂಬಿ ತುಳುಕುತ್ತಿದ್ದ ಕಾರಣ ಕೆಲವರು ಸೀಟ್ ಕೆಳಗೆ ಮತ್ತು ಕಿಟಕಿಗಳ ಬಳಿ ಸಿಲುಕಿಕೊಂಡಿದ್ದರು. ಗ್ಯಾಸ್ ಕಟರ್ ಬಳಸಿ ರಕ್ಷಣಾ ಕಾರ್ಯ ನಡೆಸಲಾಯಿತು. ರಕ್ಷಣಾ ಕಾರ್ಯಾಚರಣೆ ಇನ್ನೂ ಮುಂದುವರಿದಿದೆ.

## ಸಿಎಂ ಸಿದ್ದರಾಮಯ್ಯ ನಾನು ಬ್ರದರ್ಸ್ ರೀತಿ ಇದ್ದೀವಿ: ಡಿ.ಕೆ ಶಿವಕುಮಾರ್



**ಬೆಂಗಳೂರು:** "ನಾನು ಮತ್ತು ಸಿಎಂ ಬ್ರದರ್ಸ್ ತರಹ ಕೆಲಸ ಮಾಡ್ತಿದ್ದೇವೆ. ನಮ್ಮಲ್ಲಿ ಯಾವುದೇ ಗುಂಪು ಇಲ್ಲ, ಗುಂಪು ಇರೋದೇ ಇಲ್ಲ," ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮತ್ತೊಮ್ಮೆ ಒಗ್ಗಟ್ಟಿನ ಸಂದೇಶ ನೀಡಿದ್ದಾರೆ.

ವಿಧಾನಸೌಧದ ನಿರ್ಮಾತೃ ಮಹಾನ್ ನಾಯಕ ಕೆಂಗಲ್ ಹನುಮಂತಯ್ಯನವರ 54ನೇ ಪುಣ್ಯತಿಥಿಯ ಅಂಗವಾಗಿ ಇಂದು ಡಿಕೆಶಿ ಅವರು ವಿಧಾನಸೌಧದಲ್ಲಿ ಹನುಮಂತಯ್ಯನವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ, ಗೌರವ ನಮನ ಸಮರ್ಪಿಸಿದರು.

ನಂತರ ಮಾತನಾಡಿದ ಅವರು, "ಅದು ನನ್ನ ಮತ್ತು ಸಿಎಂ ಅವರ ನಡುವಿನ ವೈಯಕ್ತಿಕ ವಿಷಯ. ನಾವಿಬ್ಬರೂ ಸಹೋದರರಂತೆ ಇದ್ದೇವೆ. ಬ್ರದರ್ಸ್ ತರ ಕೆಲಸ ಮಾಡ್ತಿದ್ದೀವಿ. ನಮ್ಮಲ್ಲಿ ಯಾವುದೇ ಗುಂಪು ಇಲ್ಲ. ನೀವು ಮಾಧ್ಯಮದವರೇ ಏನೇನೋ ಬಿತ್ತಿ ತೋರಿಸುತ್ತಿದ್ದೀರಿ, ಸಿದ್ದರಾಮಯ್ಯ ಗುಂಪು, ಡಿಕೆಶಿ ಗುಂಪು ಅಂತ. ನಮ್ಮಲ್ಲಿ ಅಂಥ ಯಾವುದೇ ಗುಂಪು ಇಲ್ಲ. ನಾವು ಹುಟ್ಟಿದ್ದು ಒಬ್ಬರೇ, ಸಾಯುವಾಗಲೂ ಒಬ್ಬರೇ. ಹಾಗಿದ್ದಾಗ ಗುಂಪು ಯಾಕೆ ಬೇಕು?" ಎಂದು ಡಿಕೆಶಿ ಪ್ರಶ್ನಿಸಿದರು.

ಅವರು, "ಕೆಂಗಲ್ ಹನುಮಂತಯ್ಯ ವಿಧಾನಸೌಧ ಕಟ್ಟಿದರು, ಎಸ್.ಎಂ. ಕೃಷ್ಣ ವಿಕಾಸಸೌಧ ಕಟ್ಟಿದರು, ಬೆಂಗಳೂರನ್ನು ಕೆಂಪೇಗೌಡ ಕಟ್ಟಿದ್ದಾರೆ.. ಯಾರೇ ಅಧಿಕಾರಕ್ಕೆ ಬಂದರೂ ಇಂಥ ಶಾಶ್ವತ ಕೊಡುಗೆಗಳನ್ನು ಬಿಟ್ಟು ಹೋಗಬೇಕು. ನಾವೂ ಆ ದಿಕ್ಕಿನಲ್ಲಿ ಕೆಲಸ ಮಾಡಬೇಕು. ನಾನು ಮತ್ತು ಸಿಎಂ ಒಟ್ಟಿಗೆ 140 ಶಾಸಕರನ್ನ ಒಗ್ಗೂಡಿಸಿ, ರಾಜ್ಯದ ಅಭಿವೃದ್ಧಿಗೆ ಶ್ರಮಿಸುತ್ತಿದ್ದೇವೆ." ಎಂದರು.

ಬ್ರೇಕ್‌ಫಾಸ್ಟ್ ಮೀಟಿಂಗ್ ಬಗ್ಗೆ ಮಾಧ್ಯಮದವರು ಕೇಳಿದ ಪ್ರಶ್ನೆಗೆ ಉತ್ತರಿಸಿದ್ದು, "ನಿಮ್ಮ ಒತ್ತಡಕ್ಕೆ ಬ್ರೇಕ್‌ಫಾಸ್ಟ್ ಎಲ್ಲಾ? ನಮಗೆ ಅಂಥ ಯಾವುದೇ ಅಗತ್ಯ ಇಲ್ಲ. ನಾವು ಎಲ್ಲವನ್ನೂ ಒಟ್ಟಾಗೇ ಮಾಡುತ್ತಿದ್ದೇವೆ" ಎಂದು ನಗುಮೊಗದಲ್ಲಿ ಹೇಳಿದರು.

ಇದೇ ವಿಚಾರಕ್ಕೆ ಸಿಎಂ ಸಿದ್ದರಾಮಯ್ಯ ಅವರು ಪ್ರತಿಕ್ರಿಯಿಸಿದ್ದು, "ಇನ್ನೂ ಡಿಕೆಶಿ ಬ್ರೇಕ್‌ಫಾಸ್ಟ್‌ಗೆ ಕರೆದಿಲ್ಲ. ಕರೆದರೆ ಕರೆಯುತ್ತಾರೆ, ಕರೆದ್ರೆ ನಾನು ಖಂಡಿತ ಹೋಗುತ್ತೇನೆ" ಎಂದು ಸಿದ್ದು ಸರಳವಾಗಿ ಹೇಳಿದರು.

## ಪಿಹೆಚ್‌ಡಿ ಗೈಡ್‌ನಿಂದ ಲೈಂಗಿಕ ಕಿರುಕುಳ ಆತ್ಮಹತ್ಯೆಗೆ ಯತ್ನಿಸಿದ ವಿದ್ಯಾರ್ಥಿನಿ




**ಬೆಳಗಾವಿ:** ಜಿಲ್ಲೆಯ ರಾಣಿ ಚನ್ನಮ್ಮ ವಿಶ್ವವಿದ್ಯಾಲಯದಲ್ಲಿ ಪಿಎಚ್‌ಡಿ ಮಾಡುತ್ತಿದ್ದ ವಿದ್ಯಾರ್ಥಿನಿಯೊಬ್ಬರು ಮನೆಯಲ್ಲೇ ಆತ್ಮಹತ್ಯೆಗೆ ಯತ್ನಿಸಿದ್ದಾರೆ. ಉದ್ದೇಶಪೂರ್ವಕವಾಗಿ ಪಿಎಚ್‌ಡಿ ಪದವಿ ನೀಡದೆ ಸತಾಯಿಸಿದ್ದರಿಂದ ಬೇಸರಗೊಂಡು ಅವರು ಚಿಕ್ಕೋಡಿ ಪಟ್ಟಣದಲ್ಲಿರುವ ಮನೆಯಲ್ಲಿ 19ಕ್ಕೂ ಅಧಿಕ ಮಾತ್ರೆಗಳನ್ನು ಸೇವಿಸಿ ಆತ್ಮಹತ್ಯೆ ಯತ್ನಿಸಿದ್ದಾರೆ. ತಕ್ಷಣ ಆಕೆಯನ್ನು ಬೆಳಗಾವಿಯ ಬಿಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿದ್ದು ತುರ್ತು ಚಿಕಿತ್ಸೆ ನೀಡಲಾಗಿದೆ ಮತ್ತು ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ವಿದ್ಯಾರ್ಥಿನಿ ಪಿಎಚ್‌ಡಿ ಪೂರ್ಣಗೊಳಿಸಿ ಆರು ತಿಂಗಳ ಹಿಂದೆ ಸಬ್‌ಮಿಟ್ ಮಾಡಿದ್ದರು. ಆದರೆ, ವಿನಾ ಕಾರಣ ಪದವಿ ನೀಡಿರಲಿಲ್ಲ ಎಂಬ ಆರೋಪ ಕೇಳಿಬಂದಿದೆ. ವಿದ್ಯಾರ್ಥಿನಿಯ ಗೈಡ್ ಕೆ.ಎಲ್.ಎನ್. ಮೂರ್ತಿ, ಕುಲಪತಿ ಸಿ.ಎಂ. ತ್ಯಾಗರಾಜ್ ಮತ್ತು ರಿಜಿಸ್ಟರ್ ಸಂತೋಷ ಕಾಮೇಗೌಡ ವಿರುದ್ಧ ಲೈಂಗಿಕ ಕಿರುಕುಳ ಮತ್ತು ಟಾರ್ಗೆಟ್ ಮಾಡಿರುವ ಆರೋಪಗಳು ಕೇಳಿಬಂದಿವೆ.

**ಗೈಡ್ ಲೈಂಗಿಕ ಕಿರುಕುಳ ನೀಡಿದ್ದ ಬಗ್ಗೆ ದೂರು ನೀಡಿದ್ದ ವಿದ್ಯಾರ್ಥಿನಿ**

ಗೈಡ್ ಕೆಎಲ್‌ಎನ್ ಮೂರ್ತಿ ಲೈಂಗಿಕ ಕಿರುಕುಳ ನೀಡಿದ್ದ ವಿಚಾರವಾಗಿ ಕುಲಪತಿಯವರಿಗೆ ಹಾಗೂ ರಿಜಿಸ್ಟ್ರಾರ್‌ಗೆ ವಿದ್ಯಾರ್ಥಿನಿ ದೂರು ನೀಡಿದ್ದರು. ನಂತರ ಗೈಡ್ ಸಂಬಂಧಿತ ಸಮಸ್ಯೆ ಬಗೆಹರಿಸಲಾಗಿತ್ತು. ಆದರೂ ತಮ್ಮನ್ನು ಟಾರ್ಗೆಟ್ ಮಾಡಿ ಪಿಎಚ್‌ಡಿ ನೀಡಿಲ್ಲ ಎಂದು ವಿದ್ಯಾರ್ಥಿನಿ ಆರೋಪಿಸಿದ್ದಾರೆ.

ಎಲ್ಲ ಸಮಸ್ಯೆ ಪರಿಹರಿಸಿದರೂ ಕೂಡ, ಪಿಎಚ್ಡಿ ಪದವಿ ನೀಡಲಿಲ್ಲ ಎಂಬ ಆರೋಪವನ್ನು ವಿದ್ಯಾರ್ಥಿನಿ ಮಾಡಿದ್ದಾರೆ. ಈ ಘಟನೆ ಚಿಕ್ಕೋಡಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಸಂಭವಿಸಿದೆ.

**ವಿವಿ ಕುಲಪತಿ ಸಿ.ಎಂ ತ್ಯಾಗರಾಜ ಕೊಟ್ಟ ಸ್ಪಷ್ಟನೆ ಏನು?**

ಈ ಮಧ್ಯೆ, ರಾಣಿ ಚನ್ನಮ್ಮ ವಿವಿ ಕುಲಪತಿ ಸಿ.ಎಂ ತ್ಯಾಗರಾಜ ಸುದ್ದಿಗೋಷ್ಠಿ ನಡೆಸಿ ಪ್ರತಿಕ್ರಿಯೆ ನೀಡಿದ್ದಾರೆ. ಇತಿಹಾಸ ವಿಭಾಗದಲ್ಲಿ ವಿದ್ಯಾರ್ಥಿನಿ ಸಂಶೋಧನೆ ನಡೆಸಿ ಪ್ರಬಂಧ ಸಲ್ಲಿಕೆ ಮಾಡಿದ್ದರು. ಭಾನುವಾರ ಸಂಜೆ ವಿದ್ಯಾರ್ಥಿನಿ ಆರೋಗ್ಯದಲ್ಲಿ ಹೆಚ್ಚು ಕಡಿಮೆಯಾಗಿರುವ ವಿಚಾರ ತಿಳಿಯಿತು. 2021ರಲ್ಲಿ ಸಂಶೋಧನೆ ಆರಂಭ ಮಾಡಿ 2025ರಲ್ಲಿ ಆ ವಿದ್ಯಾರ್ಥಿ ಸಂಶೋಧನೆ ಪೂರ್ಣ ಆಗಿದೆ. ಪ್ರಾಧ್ಯಾಪಕರ ಮೇಲೆ ವಿದ್ಯಾರ್ಥಿನಿ ಕಿರುಕುಳ ಆರೋಪ ಮಾಡಿದ್ದರು. ಸಿಂಡಿಕೇಟ್‌ನಲ್ಲಿ ವಿಚಾರ ಮುಂದಿಟ್ಟು ವರದಿ ನೀಡಲು ಸೂಚಿಸಲಾಗಿತ್ತು. ಆಗ ಪ್ರಾಧ್ಯಾಪಕ ಕೆಎನ್ ಮೂರ್ತಿ ಕಿರುಕುಳ ನೀಡಿದ್ದು ಪ್ರಾಥಮಿಕವಾಗಿ ತಿಳಿದುಬಂದಿತ್ತು. ಅವರ ವಿರುದ್ಧ ಕ್ರಮಕ್ಕೆ ತೀರ್ಮಾನ ಕೈಗೊಂಡಿದ್ದೆವು. ಕೆಲಸದಿಂದ ಅಮಾನತು ಮಾಡಿ ಆದೇಶ ಮಾಡಲಾಗಿತ್ತು. ಇದಾದ ಬಳಿಕ ವಿದ್ಯಾರ್ಥಿನಿ ತಮ್ಮ ದೂರು ವಾಪಾಸ್ ಪಡೆದಿದ್ದಳು. ಇಷ್ಟಾದರೂ ಮತ್ತೊಮ್ಮೆ ಸಿಂಡಿಕೇಟ್‌ನಲ್ಲಿ ಚರ್ಚೆ ಮಾಡಿ ಪ್ರಮಾಣ ಪತ್ರ ನೀಡಲು ಮುಂದಾಗಿದ್ದೆವು. ತೀರ್ಮಾನ ಆಗದ ಹಿನ್ನೆಲೆ ಘಟಿಕೋತ್ಸವದಲ್ಲಿ ಅವರಿಗೆ ಪಿಎಚ್‌ಡಿ ಪದವಿ ನೀಡಲು ಆಗಲಿಲ್ಲ. 4ರಂದು ತುರ್ತು ಸಿಂಡಿಕೇಟ್ ಸಭೆ ಕರೆಯಲಾಗಿದ್ದು ಅದರಲ್ಲಿ ತೀರ್ಮಾನ ಮಾಡುತ್ತೇವೆ ಎಂದು ಅವರು ತಿಳಿಸಿದ್ದಾರೆ.

## ಜಾತಿ ಬೇರೆ ಅಂತ ಯುವಕನ ಕೊಲೆ; ಲವ್ವರ್ ಮೃತದೇಹವನ್ನೇ ಮದುವೆಯಾದ ಯುವತಿ



**ಮುಂಬೈ:** ಮ ಹಾ ರಾ ಷ್ಟ್ರ ದ ನಾಂದೇಡ್ ನಲ್ಲಿ ತನ್ನ ಮನೆ ಯ ವರಿಂ ದ ಹತ್ಯೆ ಯಾ ದ ಪ್ರಿಯಕರನ ಮೃತದೇಹ ವನ್ನೇ ಯುವತಿ ಮದುವೆಯಾಗಿರುವ ಘಟನೆ ನಡೆದಿದೆ.

ಕ್ಷಮ್ ಟೇಟ್ ಕೊಲೆಯಾದ ಯುವಕ. ಆತನನ್ನು ಪ್ರೀತಿಸುತ್ತಿದ್ದ ಆಂಚಲ್ ಈಗ ಅತ್ತೆ ಮನೆ ಸೇರಿದ್ದಾಳೆ. ಪ್ರಿಯಕರನ ಮೃತದೇಹವನ್ನೇ ವರಿಸಿದ ಯುವತಿ ತನ್ನ ಕುಟುಂಬವನ್ನು ತೊರೆದಿದ್ದಾಳೆ.

ಆಂಚಲ್ ತನ್ನ ಸಹೋದರರ ಮೂಲಕ ಸಕ್ಷಮ್ ಟೇಟ್‌ನನ್ನು ಭೇಟಿಯಾದಳು. ಆಗಾಗ್ಗೆ ಆತನ ಮನೆಗೆ ಭೇಟಿ ನೀಡುತ್ತಿದ್ದಳು. ಇಬ್ಬರ ನಡುವೆ ಸ್ನೇಹವಾಗಿ, ಸ್ನೇಹ ಪ್ರೀತಿಗೆ ತಿರುಗಿತು. 3 ವರ್ಷ ಪ್ರೀತಿಯಲ್ಲಿದ್ದ ಜೋಡಿಯ ಮದುವೆಗೆ ಹುಡುಗಿಯ ಮನೆಯವರ ವಿರೋಧವಿತ್ತು. ಜಾತಿ ಬೇರೆ ಬೇರೆ ಎಂಬ ಕಾರಣಕ್ಕೆ ಇಬ್ಬರ ಮದುವೆಗೆ ಹುಡುಗಿ ಕಡೆಯವರು ನಿರಾಕರಿಸಿದ್ದರು. ಆಕೆಯನ್ನು ಮರೆತುಬಿಡುವಂತೆ ಹುಡುಗನಿಗೆ ಬೆದರಿಕೆ ಹಾಕಿದ್ದರು. ಆದರೆ, ಅವರಿಬ್ಬರು ತಮ್ಮ ಪ್ರೀತಿಯನ್ನು ಮುಂದುವರಿಸಿದ್ದರು. ಇದರಿಂದ ಸಿಟ್ಟಾದ ಹುಡುಗಿ ಮನೆಯವರು, ಯುವಕನನ್ನು ಥಳಿಸಿ ಗುಂಡು ಹಾರಿಸಿ ಹತ್ಯೆ ಮಾಡಿದರು.

ಇದರಿಂದ ಮನನೊಂದ ಯುವತಿ, ಸಕ್ಷಮ್ ಅಂತ್ಯಕ್ರಿಯೆ ವೇಳೆ ಆತನ ಹಣೆಯ ಮೇಲೆ ತಿಲಕ ಇಟ್ಟು ಮದುವೆಯಾಗಿದ್ದಾಳೆ. ನಾನು ಇನ್ಮುಂದೆ ಸಕ್ಷಮ್ ಮನೆಯಲ್ಲಿ ಸೊಸೆಯಾಗಿ ವಾಸಿಸುತ್ತೇನೆಂದು ಪ್ರತಿಜ್ಞೆ ಮಾಡಿದ್ದಾಳೆ

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ಅಯ್ಯಪ್ಪ ಮಾಲೆ ಧರಿಸಿಬಂದ ವಿದ್ಯಾರ್ಥಿಗಳನ್ನ ಕಾಲೇಜಿನಿಂದ ಹೊರಹಾಕಿದ ಪ್ರಿನ್ಸಿಪಾಲ್: ಭುಗಿಲೆದ್ದ ಆಕ್ರೋಶ



**ಚಿಕ್ಕಮಗಳೂರು:** ಶಬರಿಮಲೆ ಅಯ್ಯಪ್ಪ ಮಾಲೆ ಧರಿಸಿ ಬಂದಿದ್ದ ವಿದ್ಯಾರ್ಥಿಗಳನ್ನು (Students) ಕಾಲೇಜಿನಿಂದ (College) ಹೊರಹಾಕಿರುವ ಘಟನೆ ಚಿಕ್ಕಮಗಳೂರಿನಲ್ಲಿ (Chikkamagaluru) ನಡೆದಿದೆ. ಚಿಕ್ಕಮಗಳೂರು ನಗರದ ಎಂಇಎಸ್ ಪಿಯು ಕಾಲೇಜಿನಲ್ಲಿ ಅಯ್ಯಪ್ಪ ಮಾಲೆ ಧರಿಸಿದ ಮೂವರು ಪ್ರಥಮ ಪಿಯುಸಿ ವಿದ್ಯಾರ್ಥಿಗಳನ್ನು ಪ್ರಿನ್ಸಿಪಾಲ್ ಹೊರಗೆ ಹಾಕಿದ್ದು, ಮಾಲೆ ತೆಗೆದು ಒಳಗೆ ಬನ್ನಿ ಎಂದು ತಾಕೀತು ಮಾಡಿದ್ದಾರೆ ಎಂದು ಆರೋಪ ಕೇಳಿಬಂದಿದೆ. ಈ ವಿಚಾರ ತಿಳಿಯುತ್ತಿದ್ದಂತೆಯೇ ಹಿಂದೂ ಸಂಘಟನೆ, ಬಿಜೆಪಿ ಕಾರ್ಯಕರ್ತರು ಕಾಲೇಜು ಬಳಿ ಬಂದು ಪ್ರಿನ್ಸಿಪಾಲ್ ನಡುವೆ ವಾಗ್ವಾದ ನಡೆಸಿದ್ದಾರೆ.

ಚಿಕ್ಕಮಗಳೂರು ನಗರದ MES ಪಿಯು ಕಾಲೇಜಿನಲ್ಲಿ ಮೊದಲ ವರ್ಷದ ಪಿಯು ವ್ಯಾಸಂಗ ಮಾಡುತ್ತಿರುವ ಮೂವರು ವಿದ್ಯಾರ್ಥಿಗಳು ಅಯ್ಯಪ್ಪ ಮಾಲೆ ಧರಿಸಿ ತರಗತಿಗೆ ಬಂದಿದ್ದಾರೆ. ಆದ್ರೆ, ಇದಕ್ಕೆ ಪ್ರಿನ್ಸಿಪಾಲ್ ಆಕ್ಷೇಪ ವ್ಯಕ್ತಪಡಿಸಿದ್ದು, ಅಯ್ಯಪ್ಪ ಮಾಲೆ ತೆಗೆದು ಬರುವಂತೆ ಸೂಚನೆ ನೀಡಿ ಹೊರಗೆ ಕಳುಹಸಿದ್ದಾರೆ. ಈ ವಿಚಾರ ತಿಳಿಯುತ್ತಿದ್ದಂತೆಯೇ ಬಿಜೆಪಿ ಜಿಲ್ಲಾಧ್ಯಕ್ಷ ದೇವರಾಜ್ ಶೆಟ್ಟಿ ಸೇರಿದಂತೆ ನೂರಾರು ಹಿಂದೂ ಸಂಘಟನೆಗಳ ಮುಖಂಡರು, ಕಾಲೇಜು ಬಳಿ ಬಂದು ಕಾಲೇಜ್ ಅಡಳಿತ ಮಂಡಳಿಯ ವಿರುದ್ಧ ಆಕ್ರೋಶ ಹೊರಹಾಕಿದ್ದು, ಅಯ್ಯಪ್ಪ ಮೂಲಾಧಾರಿಗಳನ್ನ ಹೊರ ಕಳಿಸಿದ್ರೆ ನೂರಾರು ವಿದ್ಯಾರ್ಥಿಗಳಿಗೆ ಮಾಲೆ ಹಾಕಿಸುವ ಎಚ್ಚರಿಕೆ ನೀಡಿದರು.

**ತರಗತಿಗೆ ಕೂರಲು ಒಪ್ಪಿಗೆ ನೀಡಿದ ಪ್ರಿನ್ಸಿಪಾಲ್**

ಕಾಲೇಜು ಬಳಿ ನೂರಾರು ಹಿಂದೂ ಸಂಘಟನೆ ಕಾರ್ಯಕರ್ತರು ಆಗಮಿಸಿ ಆಡಳಿ ಮಂಡಿಳಿ ವಿರುದ್ಧ ಆಕ್ರೋಶ ವ್ಯಕ್ತಡಿಸಿದ್ದು, ಈ ಪ್ರಕರಣ ತೀವ್ರ ಸ್ವರೂಪ ಪಡೆದುಕೊಳ್ಳುತ್ತಿದ್ದಂತೆಯೇ ಸ್ಥಳಕ್ಕೆ ಬಸವನಹಳ್ಳಿ ಪೊಲೀಸರು ಸ್ಥಳಕ್ಕೆ ಭೇಟಿ ಪರಿಶೀಲನೆ ನಡೆಸಿದ್ದಾರೆ. ಬಳಿ ವಾದ ವಿವಾದದ ಬಳಿಕ ಅಂತಿಮವಾಗಿ ಅಯ್ಯಪ್ಪ ಮಾಲೆ ಹಾಕಿಕೊಂಡು ಬಂದಿದ್ದ ಮೂವರು ವಿದ್ಯಾರ್ಥಿಗಳನ್ನು ತರಗತಿಗೆ ಕೂಡಲು ಪ್ರಿನ್ಸಿಪಾಲ್ ಅನುಮತಿ ನೀಡಿದ್ದಾರೆ. ಜೊತೆಗೆ ಆಡಳಿತ ಮಂಡಳಿ ಜೊತೆ ಚರ್ಚಿಸಿ ಮುಂದಿನ ನಿರ್ಧಾರ ಕೈಗೊಳ್ಳುವುದಾಗಿ ಹೇಳಿದ್ದಾರೆ.

**ಸ್ಪಷ್ಟನೆ ನೀಡಿದ ಪ್ರಿನ್ಸಿಪಾಲ್**

ಇನ್ನು ಈ ಬಗ್ಗೆ ಪ್ರತಿಕ್ರಿಯಿಸಿದ MES ಪಿಯು ಕಾಲೇಜಿನ ಪ್ರಿನ್ಸಿಪಾಲ್, ನಾವು ಸರ್ಕಾರ ಹಾಗೂ ಕಾಲೇಜು ಆಡಳಿತ ಮಂಡಳಿಯ ಆದೇಶ ಪಾಲಿಸಿದ್ದೇವೆ. ನಮ್ಮಲ್ಲಿ ಸಮವಸ್ತ್ರ ಬಿಟ್ಟು ಬೇರೆ ಯಾವುದೇ ಬಟ್ಟೆ ಧರಿಸುವಂತಿಲ್ಲ. ವಿದ್ಯಾರ್ಥಿಗಳಿಗೆ ನಾವು ತಿಳಿ ಹೇಳಿದ್ದೇವೆ ಅಷ್ಟೇ. ಸದ್ಯಕ್ಕೆ ಮೂವರು ವಿದ್ಯಾರ್ಥಿಗಳನ್ನ ತರಗತಿಗೆ ಕೂರುವಂತೆ ಸೂಚನೆ ನೀಡಿದ್ದು, ಈ ಬಗ್ಗೆ ಆಡಳಿತ ಮಂಡಳಿಯ ಜೊತೆ ಚರ್ಚೆ ಮಾಡುತ್ತೇವೆ ಎಂದು ಸ್ಪಷ್ಟಪಡಿಸಿದರು.

ದತ್ತ ಜಯಂತಿ ಸಂದರ್ಭದಲ್ಲೇ ಚಿಕ್ಕಮಗಳೂರಿನಲ್ಲಿ ಉದ್ಭವಿಸಿದ್ದ ಅಯ್ಯಪ್ಪಸ್ವಾಮಿ ಮಾಲೆ ವಿವಾದ ಕೊಂಚ ತಣ್ಣಗಾಗಿದೆ

# ಗಂಡನ ಸಾವಿನ ಚಿಂತೆಯಲ್ಲೇ ಪ್ರಾಣಬಿಟ್ಟ ಮಹಿಳೆ



**ನೆಲಮಂಗಲ:** ಗಂಡನನ್ನು ಕಳೆದುಕೊಂಡು ಮಾನಸಿಕ ಖಿನ್ನತೆಯಿಂದ ಬಳಲುತ್ತಿದ್ದ ಮಹಿಳೆ (Woman) ಡೆತ್ ನೋಟ್ ಬರೆದಿಟ್ಟು ಆತ್ಮಹತ್ಯೆಗೆ ಶರಣಾಗಿದ್ದಾಳೆ. 31 ವರ್ಷದ ಸೌಭಾಗ್ಯ ಇಂದು (ಡಿಸೆಂಬರ್ 01) ತನ್ನಿಬ್ಬರು ಇಬ್ಬರು ಮಕ್ಕಳನ್ನು ಬಿಟ್ಟು ಆತ್ಮಹತ್ಯೆ ಮಾಡಿಕೊಂಡಿದ್ದಾಳೆ. ಬೆಂಗಳೂರು ಉತ್ತರ (Bengaluru North) ತಾಲೂಕಿನ ತೋಟದ ಗುಡ್ಡದಹಳ್ಳಿಯಲ್ಲಿ ಘಟನೆ ನಡೆದಿದೆ. ಎರಡು ವರ್ಷದ ಹಿಂದೆ ಗಂಡನನ್ನು ಕಳೆದುಕೊಂಡ ಬಳಿಕ ಮಾನಸಿಕವಾಗಿ ನೊಂದಿದ್ದ ಸೌಭಾಗ್ಯ ಮನೆಯಲ್ಲಿಯೇ ನೇಣು ಬಿಗಿದುಕೊಂಡು ಸಾವಿಗೆ ಶರಣಾಗಿದ್ದಾರೆ. ಇದರಿಂದಾಗಿ ಅಕೆಯ ಇಬ್ಬರು ಮಕ್ಕಳು ಅನಾಥರಾಗಿದ್ದಾರೆ.

ಕೈವಾರ ಮೂಲದ ನಿವಾಸಿ ಬೆಂಗಳೂರಿನಲ್ಲಿ ವಾಸವಾಗಿದ್ದು, ತೋಟದಗುಡ್ಡದಹಳ್ಳಿಯ ಸಾಯಿ ರಾಮ ಲೇಔಟ್ ನಲ್ಲಿ ಸೌಭಾಗ್ಯ ತನ್ನಿಬ್ಬರು ಮಕ್ಕಳ ಜೊತೆ ಬಾಡಿಗೆ ಮನೆಯಲ್ಲಿ ನೆಲೆಸಿದ್ದರು. ದೇವಸ್ಥಾನದಲ್ಲಿ ಸಣ್ಣಪುಟ್ಟ ಕೆಲಸ ಮಾಡಿಕೊಂಡು ಮಕ್ಕಳನ್ನು ಸಾಕುತ್ತಿದ್ದರು. ದೇವಸ್ಥಾನ, ಮನೆ ಬಿಟ್ಟು ಸೌಭಾಗ್ಯ ಬೇರೆ ಕಡೆ ಎಲ್ಲೂ ಹೋಗುತ್ತಿರಲಿಲ್ಲ. ಆದ್ರೆ, ಗಂಡ ಸಾವಿನಿಂದ ಮಾನಸಿಕವಾಗಿ ಖಿನ್ನತೆಗೆ ಒಳಗಾಗಿದ್ದರು ಎನ್ನಲಾಗಿದೆ. ಈ ಹಿನ್ನೆಲೆ ಡೆತ್ ನೋಟ್ ಬರೆದಿಟ್ಟು ಸೌಭಾಗ್ಯ ಆತ್ಮಹತ್ಯೆಗೆ ಶರಣಾಗಿದ್ದಾಳೆ. ಈ ಸಂಬಂಧ ಮಾದನಾಯಕನಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಈ ಬಗ್ಗೆ ಪೊಲೀಸರು ಹೆಚ್ಚಿನ ವಿಚಾರಣೆ ನಡೆಸುತ್ತಿದ್ದಾರೆ.

ಗಂಡ ಇಲ್ಲದಿದ್ದರೆ ಏನಂತೆ ಇಬ್ಬರು ಮುದ್ದಾದ ಮಕ್ಕಳಿಗೋಸ್ಕರವಾದರೂ ಸೌಭಾಗ್ಯ ಜೀವನ ಸಾಗಿಸಬೇಕಿತ್ತು. ಮಕ್ಕಳ ಅವರ ಮುಂದಿನ ಜೀವನ ರೂಪಿಸಬೇಕಿತ್ತು. ಆದ್ರೆ, ಸೌಭಾಗ್ಯ ದುಡುಕಿನ ನಿರ್ಧಾರ ಕೈಗೊಂಡು ಇದೀಗ ಪುಟ್ಟ ಮಕ್ಕಳನ್ನು ಅನಾಥ ಮಾಡಿದ್ದು ದುರಂತವೇ ಸರಿ.

# ಪ್ರಜ್ವಲ್ ಅತ್ಯಾಚಾರ ಕೇಸಿಗೆ ಹೊಸ ತಿರುವು ಕೊಟ್ಟ ವಕೀಲ



**ಬೆಂಗಳೂರು:** ಅತ್ಯಾಚಾರ ಪ್ರಕರಣದಲ್ಲಿ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಜೀವತಾವಧಿ ಶಿಕ್ಷೆಗೆ ಗುರಿಯಾಗಿದ್ದಾರೆ. ಆದ್ರೆ, ಇದೀಗ ಈ ಶಿಕ್ಷೆಯನ್ನು ಅಮಾನತ್ತಿನಲ್ಲಿಟ್ಟು ಜಾಮೀನು ನೀಡುವಂತೆ ಹೈಕೋರ್ಟ್‌ಗೆ (Karnataka High Court) ಅರ್ಜಿ ಸಲ್ಲಿಸಿದ್ದು, ಇಂದು (ಡಿಸೆಂಬರ್ 01) ನ್ಯಾಯಮೂರ್ತಿಗಳಾದ ಕೆ.ಎಸ್ ಮುದಗಲ್ ಮತ್ತು ಟಿ ವೆಂಕಟೇಶ್ ನಾಯಕ್ ವಿಭಾಗೀಯ ಪೀಠ ಅರ್ಜಿ ವಿಚಾರಣೆ ನಡೆಯಿತು. ಈ ವೇಳೆ ಪ್ರಜ್ವಲ್ ರೇವಣ್ಣ ಪರ ಹಿರಿಯ ವಕೀಲ ಸಿದ್ಧಾರ್ಥ್ ಲೂಥ್ರಾ ಪ್ರಬಲ ವಾದ ಮಂಡಿಸಿದ್ದು, ಸಂತ್ರಸ್ತೆಯ ಮೌನ, ಸಾಕ್ಷ್ಯಗಳ ಮೇಲಿನ ಸಂಶಯಗಳನ್ನು ಮುಂದಿಟ್ಟು ಶಿಕ್ಷೆ ಅಮಾನತುಗೊಳಿಸಿ ಜಾಮೀನು ನೀಡುವಂತೆ ಮನವಿ ಮಾಡಿದರು.

**ಪ್ರಜ್ವಲ್ ಪರ ವಕೀಲರ ವಾದ ಹೇಗಿತ್ತು?**


ಪ್ರಜ್ವಲ್ ರೇವಣ್ಣ ಪರವಾಗಿ ಹಿರಿಯ ವಕೀಲ ಸಿದ್ಧಾರ್ಥ್ ಲೂಥ್ರಾ, ಪ್ರಬಲ ವಾದ ಮಂಡಿಸಿದ್ದು, ಪ್ರಜ್ವಲ್ 2024 ಏಪ್ರಿಲ್ 24ರಂದು ದೇಶ ತೊರೆಯುವಾಗ ಅವರ ವಿರುದ್ಧ ಯಾವುದೇ ಪ್ರಕರಣ ದಾಖಲಾಗಿರಲಿಲ್ಲ. ಆ್ಯಪಲ್ ಮೊಬೈಲ್ ವಶಕ್ಕೆ ನೀಡಿಲ್ಲವೆಂದು ಪ್ರಾಸಿಕ್ಯೂಷನ್ ಆರೋಪಿಸಿದೆ. ಆ್ಯಪಲ್ ಮೊಬೈಲ್ ನೀಡುವಂತೆ ಸೆ.91ರ ಅಡಿ ನೋಟಿಸ್ ನೀಡಿಲ್ಲ. ಐಎಂಇಐ ನಂಬರ್ ಆಧರಿಸಿ ಮೊಬೈಲ್ ಕಂಪನಿಯಿಂದ ಮಾಹಿತಿ ಪಡೆಯಲು ಯತ್ನಿಸಿಲ್ಲ. ಸಂತ್ರಸ್ತೆ ದೂರು ದಾಖಲಿಸದೇ 3 ವರ್ಷ ಮೌನವಾಗಿ ಇದ್ದಿದ್ದೇಕೆ? ಒಮ್ಮೆಗೇ ನಾಲ್ಕು ಪ್ರತ್ಯೇಕ ಕ್ರಿಮಿನಲ್ ಕೇಸ್‌ಗಳು ಹೇಗೆ ದಾಖಲಾದವು? ಎಂದು ಪ್ರಶ್ನಿಸಿದರು.

**ಎಫ್ಎಸ್ಎಲ್ ಸಾಕ್ಷಿ ಬಗ್ಗೆ ಸಂಶಯ**

ಇನ್ನು ಇದೇ ವೇಳೆ ಎಫ್ಎಸ್ಎಲ್ ಸಾಕ್ಷಿ ಬಗ್ಗೆ ಸಂಶಯ ವ್ಯಕ್ತಪಡಿಸಿದ ವಕೀಲ ಸಿದ್ಧಾರ್ಥ್ ಲೂಥ್ರಾ , ರಾಜಕೀಯ ದುರುದ್ದೇಶದಿಂದ ಈ ಪ್ರಕರಣಗಳನ್ನು ದಾಖಲಿಸಲಾಗಿದೆ. ಸಂತ್ರಸ್ತೆಯನ್ನು ಇಲ್ಲಿನ ಸರ್ಕಾರ ಬಳಸಿ ಕೇಸ್ ದಾಖಲಿಸಿದೆ. 2019, 2021ರಲ್ಲಿ ಅತ್ಯಾಚಾರಕ್ಕೆ ಒಳಗಾದರೂ 2023ರಲ್ಲಿ ಸಂತ್ರಸ್ತೆ ಬಂದಿದ್ದೇಕೆ? ಫಾರ್ಮ್ ಹೌಸ್‌ಗೆ ಬಂದರೂ ಆಕೆಯ ಬಟ್ಟೆಗಳನ್ನು ಹಿಂಪಡೆಯಲಿಲ್ಲವೇಕೆ? ಪೊಲೀಸರು ಬಟ್ಟೆಯನ್ನು ವಶಕ್ಕೆ ಪಡೆದಿರುವುದೇ ಸಂಶಯಾಸ್ಪದವಾಗಿದೆ. ಡಿಎನ್‌ಎ ಪರೀಕ್ಷೆ ಮಾಡಿದ ವ್ಯಕ್ತಿಯೇ ಮೃತಪಟ್ಟಿದ್ದಾರೆ. ಹೀಗಾಗಿ FSL ಸಾಕ್ಷಿ ಒಪ್ಪತಕ್ಕದ್ದಲ್ಲವೆಂದು ಪ್ರಬಲ ವಾದ ಮಂಡಿಸಿದರು.

ಹೀಗೆ ಪ್ರಶ್ನೆಗಳ ಮೇಲೆ ಪ್ರಶ್ನೆ ಹಾಕಿದ ಪ್ರಜ್ವಲ್ ಪರ ವಕೀಲರ ವಾದ ಆಲಿಸಿದ ಹೈಕೋರ್ಟ್, ಮುಂದಿನ ವಿಚಾರಣೆಯನ್ನು ನಾಡಿದ್ದು ಅಂದರೆ ಬುಧವಾರಕ್ಕೆ ಮುಂದೂಡಿದ್ದು, ಅಂದು ಹೇಗೆಲ್ಲಾ ವಾದ ಪ್ರತಿವಾದ ನಡೆಯುತ್ತೆ? ಇದಕ್ಕೆ ಕೋರ್ಟ್ ಏನು ಹೇಳುತ್ತೆ ಎನ್ನುವುದು ತೀವ್ರ ಕುತೂಹಲ ಮೂಡಿಸಿದೆ.

# ಇ-ಸ್ಟ್ಯಾಂಪ್‌ಗೆ ಗುಡ್‌ಬೈ..! ಕರ್ನಾಟಕದಲ್ಲಿ ಈಗ ಸಂಪೂರ್ಣ ಡಿಜಿಟಲ್ ಸ್ಟ್ಯಾಂಪ್..!



**ಬೆಂಗಳೂರು:** ರಾಜ್ಯದಲ್ಲಿ ದಶಕಗಳಿಂದ ನಡೆದುಬಂದಿದ್ದ ಇ-ಸ್ಟ್ಯಾಂಪಿಂಗ್ (ಛಾಪಾ ಕಾಗದ) ವ್ಯವಸ್ಥೆಗೆ ಈಗ ಸಂಪೂರ್ಣ ಡಿಜಿಟಲ್ ರೂಪ ಬಂದಿದೆ. ನಕಲಿ ಮತ್ತು ದುರ್ಬಳಕೆ ತಡೆಗೆ ಈ ಹೊಸ ತಂತ್ರಜ್ಞಾನ ಆಧಾರಿತ ವ್ಯವಸ್ಥೆಯನ್ನು ಸರ್ಕಾರ ಜಾರಿಗೆ ತಂದಿದ್ದು, ಕಳೆದ ಅಕ್ಟೋಬರ್‌ನಿಂದಲೇ ಇದು ಅಧಿಕೃತವಾಗಿ ಕಾರ್ಯನಿರ್ವಹಿಸುತ್ತಿದೆ. ಕಂದಾಯ ಸಚಿವ ಕೃಷ್ಣಬೈರೇಗೌಡ ಸ್ಪಷ್ಟಪಡಿಸಿದಂತೆ, ಹಂತಹಂತವಾಗಿ ಭೌತಿಕ ಇ-ಸ್ಟ್ಯಾಂಪ್‌ಗಳನ್ನು ನಿಲ್ಲಿಸಲಾಗುವುದು ಮತ್ತು ಡಿಜಿಟಲ್ ಸ್ಟ್ಯಾಂಪ್ ಕಾಗದಗಳಿಗೆ ಪ್ರಾಮುಖ್ಯತೆ ನೀಡಲಾಗುವುದು.

ಹಳೆಯ ವ್ಯವಸ್ಥೆಯ ಸವಾಲುಗಳು ಹಾಗೂ ಹೊಸ ಡಿಜಿಟಲ್ ಪರಿಹಾರ ಇದುವರೆಗೆ, ಛಾಪಾ ಕಾಗದಗಳನ್ನು ಕೊಳ್ಳಲು ಜನರು ಅಧಿಕೃತ ಮಾರಾಟ ಸ್ಥಳಗಳಿಗೆ ಭೇಟಿ ನೀಡಬೇಕಾಗಿತ್ತು. ನಕಲಿ ಚಲನ್‌ಗಳ ಬಳಕೆ, ಉಪ ನೋಂದಣಿ ಅಧಿಕಾರಿಗಳಿಂದ ಅನಧಿಕೃತವಾಗಿ ಛಾಪಾ ಕಾಗದ ಪಡೆಯುವ ಸಾಧ್ಯತೆ ಇದೆ. ಜೊತೆಗೆ ಕಾಗದಗಳನ್ನು ಕಳೆದುಕೊಳ್ಳುವ ಅಪಾಯವಿದೆ ಹಾಗೂ ಮಧ್ಯವರ್ತಿಗಳ ಮೇಲಿನ ಅವಲಂಬನೆ, ಇವು ಹಳೆಯ ವ್ಯವಸ್ಥೆಯ ಪ್ರಮುಖ ಸಮಸ್ಯೆಗಳಾಗಿದ್ದವು. ಈ ಎಲ್ಲಾ ಕುಂದುಕೊರತೆಗಳನ್ನು ನಿವಾರಿಸಲು ಡಿಜಿಟಲ್ ಇ-ಸ್ಟ್ಯಾಂಪಿಂಗ್ ವ್ಯವಸ್ಥೆ ರೂಪಿಸಲಾಗಿದೆ.

**ಹೇಗೆ ಕಾರ್ಯನಿರ್ವಹಿಸುತ್ತದೆ ಹೊಸ ವ್ಯವಸ್ಥೆ?**

ಈ ಡಿಜಿಟಲ್ ವ್ಯವಸ್ಥೆಯಲ್ಲಿ, ಯಾವುದೇ ಮಧ್ಯವರ್ತಿ ಇಲ್ಲದೆ ನೇರ ಆನ್‌ಲೈನ್ ಮೂಲಕ ಛಾಪಾ ಕಾಗದ ಖರೀದಿದಬಹುದು. ಒಬ್ಬರ ಅಗತ್ಯಕ್ಕೆ ತಕ್ಕಂತೆ, ಅಗ್ರಿಮೆಂಟ್ ಮಾಡಿಕೊಳ್ಳುವ ಎಲ್ಲಾ ಪಕ್ಷಗಳು ತಮ್ಮ ಆಧಾರ್ ವಿವರಗಳನ್ನು ನೀಡಿ, OTP ದೃಢೀಕರಣ ಮಾಡಬೇಕು. ಈ ಪ್ರಕ್ರಿಯೆ ಭದ್ರತೆಗೆ ಹೆಚ್ಚಿನ ಆದ್ಯತೆ ನೀಡುತ್ತದೆ. ಪಾವತಿ ಆನ್‌ಲೈನ್ ಮಾಡಿದ ನಂತರ, ಒಂದು ನಂಬರ್ ಮತ್ತು ಕ್ಯೂಆರ್ ಕೋಡ್ ಹೊಂದಿರುವ ಡಿಜಿಟಲ್ ಛಾಪಾ ದಾಖಲೆ (ಎಸ್‌ಆರ್‌ಎನ್) ಉತ್ಪನ್ನವಾಗುತ್ತದೆ. ಈ ದಾಖಲೆಯನ್ನು ಭವಿಷ್ಯದಲ್ಲಿ ಯಾವುದೇ ಸಮಯದಲ್ಲಿ ಪ್ರಿಂಟ್ ಮಾಡಿಕೊಳ್ಳಬಹುದು ಮತ್ತು ಅದು ಕಾನೂನುಬದ್ಧವಾಗಿ ಮಾನ್ಯತೆ ಪಡೆದಿರುತ್ತದೆ. ಕಾನೂನು ಸೌಕರ್ಯ ಮತ್ತು ಹೆಚ್ಚುವರಿ ಅನುಕೂಲಗಳು

ಈ ಹಿಂದೆ, ನೋಂದಣಿಯಾಗದ ಒಪ್ಪಂದಗಳಿಗೆ (ಅನ್-ರಿಜಿಸ್ಟರ್ಡ್ ಅಗ್ರಿಮೆಂಟ್ಸ್) ಸ್ಟ್ಯಾಂಪ್ ಗದ ಅನ್ವಯಿಸುತ್ತಿರಲಿಲ್ಲ. ಹೊಸ ಡಿಜಿಟಲ್ ವ್ಯವಸ್ಥೆಯಲ್ಲಿ ಎಲ್ಲಾ ರೀತಿಯ ಒಪ್ಪಂದಗಳಿಗೂ ಇದನ್ನು ಬಳಸಲು ಅನುಕೂಲವಿದೆ. ಇದಕ್ಕೆ ಕಾನೂನು ಮಾನ್ಯತೆ ನೀಡಲು, 'ಕರ್ನಾಟಕ ಸ್ಟಾಂಪ್ ತಿದ್ದುಪಡಿ ವಿಧೇಯಕ-2025' ಜಾರಿಗೆ ಬಂದಿದೆ. ಈ ಕಾಯ್ದೆಯು ಡಿಜಿಟಲ್ ಸಹಿಗಳು ಮತ್ತು ದಾಖಲೆಗಳಿಗೆ ಸಂಪೂರ್ಣ ಕಾನೂನು ಬಲ ನೀಡುತ್ತದೆ. ಇದರಿಂದ, ಕಾಗದದ ದಾಖಲೆಗಳು ನಷ್ಟವಾದರೆ ಉಂಟಾಗುವ ತೊಂದರೆಗಳಿಂದ ಸಂಪೂರ್ಣವಾಗಿ ಮುಕ್ತಿ ದೊರೆತಿದೆ.

ಸಚಿವ ಕೃಷ್ಣಬೈರೇಗೌಡರು ತಿಳಿಸಿದಂತೆ, ಮನೆಯಲ್ಲಿ ಕೂತೇ ಈಗ ಛಾಪಾ ಕಾಗದ ಖರೀದಿ ಮಾಡಬಹುದು. ಇದು ಪೂರ್ತಿ ಆನ್‌ಲೈನ್ ಮತ್ತು ಭದ್ರತಾ ವ್ಯವಸ್ಥೆಯಲ್ಲಿರುತ್ತದೆ. ಈ ಹಿಂದೆ ಕಳೆದುಹೋದರೆ ದಾಖಲೆ ಇರುತ್ತಿರಲಿಲ್ಲ, ಆದರೆ ಈಗ ಒಮ್ಮೆ ಒಪ್ಪಂದ ಮಾಡಿಕೊಂಡರೆ ಡಿಜಿಟಲ್ ದಾಖಲೆ ಶಾಶ್ವತವಾಗಿ ಭದ್ರವಾಗಿರುತ್ತದೆ.

ಸರ್ಕಾರದ ಉದ್ದೇಶ, ಈ ಡಿಜಿಟಲ್ ವ್ಯವಸ್ಥೆಯನ್ನು ಸರ್ವೇಸಾಮಾನ್ಯರಿಗೆ ಸುಲಭ ಮಾಡುವುದು. ಶುಲ್ಕದ ರಚನೆಯನ್ನು ಹೆಚ್ಚಿಸದೆ, ಸೇವೆಯ ಗುಣಮಟ್ಟವನ್ನು ವರ್ಧಿಸುವುದೇ ಗುರಿ. ಸರ್ಕಾರಿ ಆದಾಯದ ಸುರಕ್ಷತೆ, ಪಾರದರ್ಶಕತೆ ಮತ್ತು ಸಾರ್ವಜನಿಕರ ಅನುಕೂಲ ಈ ಮೂರು ಅಂಶಗಳನ್ನು ಈ ಹೊಸ ಡಿಜಿಟಲ್ ಇ-ಸ್ಟ್ಯಾಂಪಿಂಗ್ ವ್ಯವಸ್ಥೆ ಖಾತರಿಪಡಿಸಲಿದೆ. ಇದು ಕರ್ನಾಟಕದ 'ಡಿಜಿಟಲ್ ಇಂಡಿಯಾ' ಪಯಣದಲ್ಲಿನ ಮತ್ತೊಂದು ಮಹತ್ವದ ಹೆಜ್ಜೆಯಾಗಿದೆ.

# 16 ವರ್ಷದ ಬಾಲಕಿಗೆ ಸಂಬಂಧಿಕನ ದೌರ್ಜನ್ಯ

**ತುಮಕೂರು:** ತುಮಕೂರಿನ ಕುಣಿಗಲ್ ತಾಲೂಕಿನ ಹುಲಿಯೂರುದುರ್ಗಾ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಬಾಲಕಿ ಮೇಲೆ ನಡೆದಿರುವ ಅತಿದಾರುಣ ಹಾಗೂ ನಿಜಕ್ಕೂ ನಡುಕ ಹುಟ್ಟಿಸುವ ಘಟನೆ ಹೊರಬಿದ್ದಿದೆ. ಕೇವಲ 16 ವರ್ಷದ ಶಾಲಾ ಬಾಲಕಿಯನ್ನು ಆಕೆಯ ದೂರದ ಸಂಬಂಧಿಕನಾಗಿರುವ ಮಲ್ಲೇಶ್ (35) ಎಂಬವನೇ ದೌರ್ಜನ್ಯಕ್ಕೆ ಒಳಪಡಿಸಿದ್ದಾನೆ ಎಂಬ ಆರೋಪಗಳು ದೃಢಪಟ್ಟಿದ್ದು, ಇದರ ಪರಿಣಾಮವಾಗಿ ಆ ಬಾಲಕಿ ಗಂಡು ಮಗುವಿಗೆ ಜನ್ಮ ನೀಡಿರುವುದು ಈಗ ಬೆಳಕಿಗೆ ಬಂದಿದೆ. ಕುಟುಂಬ ಮತ್ತು ಸ್ಥಳೀಯ ಸಮುದಾಯಕ್ಕೆ ಭಾರೀ ಮನೋವ್ಯಥೆ ಮೂಡಿಸಿರುವ ಈ ಪ್ರಕರಣದಲ್ಲಿ ಪೋಕ್ಸೋ ಕಾಯ್ದೆಯಡಿ ಪೊಲೀಸರು ಆರೋಪಿಯನ್ನು ಬಂಧಿಸಿದ್ದಾರೆ.

**ಘಟನೆ ಹೇಗೆ ಬೆಳಕಿಗೆ ಬಂತು?**

ಮಲ್ಲೇಶ್ ಬಾಲಕಿಯನ್ನು ಶಾರೀರಿಕವಾಗಿ ಹಲ್ಲೆಗೊಳಪಡಿಸಿದ್ದ ಘಟನೆ ಆಗಸ್ಟ್ ತಿಂಗಳಲ್ಲಿ ಕುಟುಂಬದ ಗಮನಕ್ಕೆ ಬಂದಿತ್ತು. ಬಾಲಕಿಯ ಆರೋಗ್ಯದಲ್ಲಿ ಬದಲಾವಣೆ ಕಂಡ ಪೋಷಕರು ಆಕೆಯನ್ನು ಆಸ್ಪತ್ರೆಗೆ ಕರೆದುಕೊಂಡು ಹೋಗಿ ವೈದ್ಯರಿಂದ ಸಂಪೂರ್ಣ ಪರೀಕ್ಷೆ ಮಾಡಿಸಿದಾಗ, ಆಕೆ ಈಗಾಗಲೇ ಏಳು ತಿಂಗಳ ಗರ್ಭಿಣಿಯಾಗಿರುವುದು ವೈದ್ಯಕೀಯ ತಪಾಸಣದಲ್ಲಿ ಪತ್ತೆಯಾಯಿತು. ಈ ಬೆಳವಣಿಗೆಗೆ ಕುಟುಂಬ ಬೆಚ್ಚಿಬಿದ್ದು ತಕ್ಷಣವೇ ವೈದ್ಯಕೀಯ ಮೇಲ್ವಿಚಾರಣೆಯಲ್ಲಿ ಚಿಕಿತ್ಸೆ ನೀಡಲಾರಂಭಿಸಿದರು. ನಂತರ ನವೆಂಬರ್ 18ರಂದು ಬಾಲಕಿ ಗಂಡು ಮಗುವಿಗೆ ಜನ್ಮ ನೀಡಿದ್ದಾಳೆ.

ಇದಾದ ಬಳಿಕ ಬಾಲಕಿಯ ಪೋಷಕರು ಹುಲಿಯೂರುದುರ್ಗಾ ಪೊಲೀಸ್ ಠಾಣೆಯಲ್ಲಿ ಅಧಿಕೃತ ದೂರು ದಾಖಲಿಸಿದರು. ಪ್ರಕರಣ ದಾಖಲಾಗುತ್ತಿದ್ದಂತೆಯೇ ಆರೋಪಿ ಮಲ್ಲೇಶ್ ಸ್ಥಳದಿಂದ ಪರಾರಿಯಾಗಿದ್ದ. ಪೊಲೀಸರು ವಿಶೇಷ ತಂಡ ರಚಿಸಿ ತನಿಖೆ ನಡೆಸಿ, ಆರೋಪಿ ಮಲ್ಲೇಶ್‌ನನ್ನು ಪತ್ತೆ ಹಚ್ಚಿ ಬಂಧಿಸಿದ್ದಾರೆ. ಈಗ ಪೋಕ್ಸೋ ಕಾಯ್ದೆಯಡಿ ಪ್ರಕರಣ ದಾಖಲಿಸಿ ಮುಂದಿನ ಕಾನೂನು ಕ್ರಮ ಕೈಗೊಳ್ಳುತ್ತಿದ್ದಾರೆ.

**ಸಂಬಂಧಿತ ಬೆಳವಣಿಗೆ:** ಈ ಘಟನೆ ನಡೆದ ಪ್ರದೇಶದಲ್ಲೇ ಮತ್ತೊಂದು ಘಟನೆ ದಾಖಲೆಯಾಗಿದ್ದು, ಸ್ಥಳೀಯ ಕೆರೆಯಲ್ಲಿ ಅಪರಿಚಿತ ವ್ಯಕ್ತಿಯ ಶವ ಪತ್ತೆಯಾಗಿದೆ. ಈ ಪ್ರಕರಣವನ್ನು ಕೂಡ ಪೊಲೀಸರು ಪ್ರತ್ಯೇಕವಾಗಿ ತನಿಖೆ ಮಾಡುತ್ತಿದ್ದಾರೆ.

ಒಟ್ಟಾರೆ, ಎರಡು ಘಟನೆಗಳೂ ಸ್ಥಳೀಯರಲ್ಲಿ ಆತಂಕ ಉಂಟುಮಾಡಿದ್ದು, ಪೊಲೀಸರು ಪ್ರಕರಣಗಳ ಸಂಪೂರ್ಣ ತನಿಖೆ ವೇಗಗೊಳಿಸಿದ್ದಾರೆ.

# ಕಾಫಿ ತೋಟದಲ್ಲಿ ಮಗು ನಾಪತ್ತೆ; 2 ವರ್ಷದ ಕಂದಮ್ಮನನ್ನು ಹುಡುಕಿದ್ದು ಶ್ವಾನ!



**ಕೊಡಗು:** ಕಾಫಿ ತೋಟಕ್ಕೆ ಕೆಲಸಕ್ಕೆಂದು ತೆರಳುವಾಗ ಪುಟ್ಟ ಮಕ್ಕಳನ್ನು ಮನೆಯಲ್ಲಿ ಬಿಟ್ಟು ಹೋಗಲು ಸಾಧ್ಯವಿಲ್ಲ ಎಂದು ಪೋಷಕರು ಅವರನ್ನೂ ಕರೆದೊಯ್ದಿದ್ದರು. ಮಕ್ಕಳೂ ಕಾಫಿ ತೋಡದ ನಡುವೆ ಆಟವಾಡಿಕೊಂಡು, ಖುಷಿ ಖುಷಿಯಾಗಿದ್ದರು. ಆದ್ರೆ ಸಂಜೆ ವೇಳೆ ಗಮನಿಸಿದಾಗ ಹೆತ್ತವರಿಗೆ ಶಾಕ್ ಆಗಿದ್ದೆ. 2 ವರ್ಷದ ಪುಟ್ಟ ಕಂದಮ್ಮನ ಕಣ್ಮರೆಯಿಂದ ಕುಟುಂಬ ಕಂಗಾಲಾಗಿದ್ದು, ಮಗುವಿಗಾಗಿ ಹುಡುಕಾಡಿದೆ. ಅರಣ್ಯ ಇಲಾಖೆಯವರೂ ಸ್ಥಳಕ್ಕೆ ಬಂದು ಶೋಧ ನಡೆಸಿದ್ದಾರೆ. ಆದರೆ, ಕೊನೆಗೆ ಆ ಮಗುವನ್ನು ಪತ್ತೆ ಮಾಡಿದ್ದು ಒಂದು ಶ್ವಾನ!

**ಘಟನೆ ಏನು?**

ಕಾಫಿ ಕೊಯ್ಲು ಹಿನ್ನೆಲೆ ಕೊಡಗು ಜಿಲ್ಲೆಯ ಪೊನ್ನಂಪೇಟೆ ತಾಲೂಕಿನ ಕೊಂಗಣ ಗ್ರಾಮದಲ್ಲಿ ಕಾರ್ಮಿಕ ದಂಪತಿ ಸುನಿಲ್ ಮತ್ತು ನಾಗಿಣಿ ತಮ್ಮ ಇಬ್ಬರು ಮಕ್ಕಳನ್ನುಜೊತೆಯೇ ಕರೆದೊಯ್ದಿದ್ದರು. ಕಾಫಿ ತೋಟದಲ್ಲಿ ಕೆಲಸ ನಿರತರಾಗಿದ್ದ ಅವರು ಸಂಜೆ ವೇಳೆ ಗಮನಿಸಿದಾಗ ಇಬ್ಬರು ಮಕ್ಕಳ ಪೈಕಿ 2 ವರ್ಷದ ಮಗು ಸುಕನ್ಯಾ ನಾಪತ್ತೆಯಾಗಿರೋದು ಗೊತ್ತಾಗಿದೆ. ಮಗಳಿಗಾಗಿ ಒಂದಿಷ್ಟು ಹುಡುಕಾಡಿದ್ದಾರೆ. ಅದರೆ ಮಗು ಪತ್ತೆಯಾದ ಕಾರಣ ವಿಷಯವನ್ನು ಅರಣ್ಯ ಇಲಾಖೆ ಅಧಿಕಾರಿಗಳಿಗೆ ಮುಟ್ಟಿಸಿದ್ದಾರೆ. ತಕ್ಷಣ ಅವರೂ ಕೂಡ ಸ್ಥಳಕ್ಕೆ ಬಂದಿದ್ದು, ಸುಕನ್ಯಾಗಾಗಿ ಕಾಫಿ ತೋಟದ ತುಂಬ ಜಾಲಾಡಿದ್ದಾರೆ. ಆದರೆ, ಮಧ್ಯರಾತ್ರಿವರೆಗೆ ಹುಡುಕಿದರೂ ಮಗು ಪತ್ತೆಯಾಗಿರಲಿಲ್ಲ.

**ಮಗು ಪತ್ತೆ ಮಾಡಿದ ಓರಿಯೋ**

ಅರಣ್ಯ ಇಲಾಖೆ ಅಧಿಕಾರಿಗಳು ಮರುದಿನವೂ ಸುಕನ್ಯಾಗಾಗಿ ಹುಡುಕಾಟ ಮುಂದುವರಿಸಿದ್ದು, ಮಗು ಪತ್ತೆಗಾಗಿ ಅನಿಲ್ ಎಂಬುವರ ಶ್ವಾನಗಳನ್ನು ಕೂಡ ಬಳಕೆ ಮಾಡಿಕೊಂಡಿದ್ದರು. ಈ ವೇಳೆ ಆ ನಾಯಿಗಳ ಪೈಕಿ ಒಂದು ಶ್ವಾನ ಸುಕನ್ಯಾಳನ್ನ ಪತ್ತೆ ಮಾಡಿದೆ. ಓರಿಯೋ ಹೆಸರಿನ ಶ್ವಾನ ಕಾಫಿ ತೋಟದ ಎತ್ತರದ ಪ್ರದೇಶದಲ್ಲಿ ಮಗು ನೋಡಿ ಬೊಗಳಲು ಆರಂಭಿಸಿದೆ. ಹೀಗಾಗಿ ಆ ಭಾಗದಲ್ಲಿ ನೋಡಿದಾಗ ಸುಕನ್ಯಾ ಪತ್ತೆಯಾಗಿದ್ದಾಳೆ. ದಟ್ಟ ಕಾರ್ಗತ್ತಲಿನಲ್ಲೇ ಒಂದು ದಿನ ಕಳೆದಿದ್ದ ಮಗು ಸುರಕ್ಷಿತವಾಗಿ ಮನೆಗೆ ಮರಳಿದೆ. ಮಗಳ ನಾಪತ್ತೆಯಿಂದ ಕಂಗಾಲಾಗಿದ್ದ ಸುನಿಲ್ ಮತ್ತು ನಾಗಿಣಿ ದಂಪತಿ ನಿಟ್ಟುಸಿರು ಬಿಟ್ಟಿದ್ದಾರೆ.

# ಬೆಳಗಾವಿಯಲ್ಲಿ ಕುಳಿತು ಅಮೆರಿಕ ಪ್ರಜೆಗಳಿಗೆ ವಂಚನೆ



**ಬೆಳಗಾವಿ:** ಕುಳಿತುಕೊಂಡು ಅಮೆರಿಕ ಪ್ರಜೆಗಳನ್ನು ವಂಚಿಸುತ್ತಿದ್ದ (Cyber Fraud) ಕತರ್ನಾಕ ಜಾಲ ಪತ್ತೆಯಾಗಿತ್ತು. ಬಾಡಿಗೆ ಕಟ್ಟಡದಲ್ಲಿ ಕಾಲ್ ಸೆಂಟರ್ ಓಪನ್ ಮಾಡುತ್ತೇವೆ ಎಂದು ಸುಳ್ಳು ಹೇಳಿ ದಂಧೆಗಿಳಿದಿದ್ದ ಖದೀಮರು ಮಾಡಿದ್ದ ಮಾತ್ರ ಅತೀ ದೊಡ್ಡ ವಂಚನೆ. ಇದೇ ಪ್ರಕರಣದಲ್ಲಿ 35 ಜನ ಅರೆಸ್ಟ್ ಆಗಿದ್ದಾರೆ. ಇನ್ನು ಅಂತಾರಾಷ್ಟ್ರೀಯ ಮಟ್ಟದ ಕೇಸ್ ಹಿನ್ನೆಲೆ ಸಿಐಡಿಗೆ ಹಸ್ತಾಂತರಿಸಲಾಗಿದೆ.

ಬೆಳಗಾವಿ ನಗರದ ಸೈಬರ್ ಪೊಲೀಸರು ರಾಷ್ಟ್ರೀಯ ಮಟ್ಟದಲ್ಲಿ ಸದ್ದಾಗುತ್ತಿದ್ದ ಪ್ರಕರಣವನ್ನು ಭೇದಿಸುವಲ್ಲಿ ಯಶಸ್ವಿಯಾಗಿದ್ದಾರೆ. ಗೃಹ ಸಚಿವ ಡಾ. ಜಿ ಪರಮೇಶ್ವರ್ ಕೂಡ ಮೆಚ್ಚುಗೆ ವ್ಯಕ್ತಪಡಿಸಿ, ತಮ್ಮ ಸಿಬ್ಬಂದಿಗಳ ಕೆಲಸದ ಬಗ್ಗೆ ಹೆಮ್ಮೆ ಪಟ್ಟಿದ್ದರು. ಇಂತಹ ಕೇಸ್ ಇದೀಗ ಸಿಐಡಿಗೆ ಹಸ್ತಾಂತರವಾಗಿದ್ದು, ನಾಲ್ಕೈದು ದಿನದಲ್ಲಿ ಸಿಐಡಿ ತಂಡ ಬೆಳಗಾವಿಗೆ ಬರಲಿದೆ.

ಈಗಾಗಲೇ ಪ್ರಕರಣ ದಾಖಲಿಸಿಕೊಂಡಿರುವ ನಗರ ಸೈಬರ್ ಠಾಣೆ ಪೊಲೀಸರು, ಈವರೆಗೂ 35 ಜನ ಆರೋಪಿಗಳನ್ನ ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ. ಬೆಳಗಾವಿಯಲ್ಲಿ ಇದ್ದುಕೊಂಡು ಅಮೆರಿಕಾದ ಪ್ರಜೆಗಳಿಗೆ ಸೈಬರ್ ವಂಚನೆ ಮಾಡುತ್ತಿದ್ದ ಖದೀಮರು ಲಾಕ್ ಆಗಿದ್ದೆ ರಣರೋಚಕ. ಕರ್ನಾಟಕದ ಯಾವೊಬ್ಬ ವ್ಯಕ್ತಿಯನ್ನ ಬಳಸಿಕೊಳ್ಳದೇ ಅಂತರ್ ರಾಜ್ಯದಿಂದ ಯುವಕರನ್ನ ಕರೆದುಕೊಂಡು ಬಂದು ದಂಧೆ ಮಾಡುತ್ತಿದ್ದವರು ಕೊನೆಗೂ ಕಂಬಿ ಎನಿಸುತ್ತಿದ್ದಾರೆ. ಅಂತಾರಾಷ್ಟ್ರೀಯ ಮಟ್ಟದ ಕೇಸ್ ಇದಾಗಿರುವ ಕಾರಣಕ್ಕೆ ಪ್ರಕರಣವನ್ನ ಸಿಐಡಿಗೆ ವರ್ಗಾಯಿಸಲಾಗಿದ್ದು, ನಾಲ್ಕೈದು ದಿನಗಳಲ್ಲಿ ಅಧಿಕಾರಿಗಳು ಪ್ರಕರಣವನ್ನ ಬೆನ್ನತ್ತಿ ಮತ್ತಷ್ಟು ವಿಚಾರ ಹೊರಗೆಳೆಯಲ್ಲಿದ್ದಾರೆ. ಅದಕ್ಕೆ ಬೇಕಾದ ತಯಾರಿ ಕೂಡ ಈಗಾಗಲೇ ಸ್ಥಳೀಯ ಪೊಲೀಸರು ನಡೆಸಿದ್ದಾರೆ.

**ಪ್ರಕರಣದ ಹಿನ್ನೆಲೆ**

ಗುಜರಾತ್‌ನಲ್ಲಿರುವ ಕಿಂಗ್ ಪಿನ್ ಬೆಳಗಾವಿಗೆ ಹೇಗೆ ಬಂದ ಎಂದರೆ, ಗುಜರಾತ್‌ನಲ್ಲಿರುವ ಸಾಗರ್ ಎಂಬಾತ ಕಿಂಗ್‌ಪಿನ್, ನಿನ್ನೆ ಅರೆಸ್ಟ್ ಆಗಿರುವ ತೌಸೀಫ್‌ಗೆ ಪರಿಚಯ. ಈ ಪರಿಚಯವಾಗಿದ್ದು ದಾಂಡೇಲಿಯಲ್ಲಿರುವ ರೆಸಾರ್ಟ್‌ನಲ್ಲಿ. ತೌಸೀಫ್‌ಗೆ ಸೇರಿದ ರೇಸಾರ್ಟ್‌ಗಳು ದಾಂಡೇಲಿಯಲ್ಲಿವೆ. ಜನರನ್ನು ವಂಚಿಸಿ ಮೋಜು, ಮಸ್ತಿಗೆ ದಾಂಡೇಲಿಗೆ ಬರುತ್ತಿದ್ದ ಕಿಂಗ್‌ಪಿನ್ ತೌಸೀಫ್ ಬಳಿ ಬಂದು ದಂಧೆ ಬಗ್ಗೆ ಮಾತನಾಡಿದ್ದಾನೆ. ತಮ್ಮ ದಂಧೆಗೆ ತೊಂದರೆ ಆಗದಂತೆ ಒಂದು ಕಚೇರಿಯನ್ನ ಕೊಡಿಸುವಂತೆ ಹೇಳಿದ್ದಾನೆ. ಈ ವೇಳೆ ಬೆಳಗಾವಿಯಲ್ಲಿರುವ ಅಫ್ತಾಪ್ ಎಂಬಾತನಿಗೆ ಸಂಪರ್ಕ ಮಾಡಿದ್ದಾನೆ. ಆತ ಎಪಿಎಂಸಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಒಂದು ಕಚೇರಿಯನ್ನ ಬಾಡಿಗೆಗೆ ಕೊಡಿಸಿದ್ದಾನೆ. ಇದಾದ ಬಳಿಕ ಅಂತರ್ ರಾಜ್ಯದಿಂದ 33 ಜನ ಯುವಕರನ್ನ ಕರೆದುಕೊಂಡು ಬಂದು ಇಲ್ಲಿ ಕಾಲ್ ಸೆಂಟರ್ ಹೆಸರಿನಲ್ಲಿ ದಂಧೆ ಶುರು ಮಾಡಿದ್ದರು.

**ಅಮೆರಿಕ ಪ್ರಜೆಗಳೇ ಟಾರ್ಗೆಟ್**

ಕಾಲ್ ಸೆಂಟರ್‌ನಲ್ಲಿ ಕೆಲಸ ಮಾಡ್ತಿದ್ದವರಿಗೆ ತೌಸೀಫ್‌ನ ಹೋಟೆಲ್‌ನಿಂದಲೇ ನಿತ್ಯ ಆಹಾರ ಕೂಡ ಹೋಗುತ್ತಿತ್ತು. ಬೆಳಗಾವಿಯಲ್ಲಿ ಕುಳಿತುಕೊಂಡು ಡಾರ್ಕ್ ವೆಬ್‌ನಲ್ಲಿ ಅಮೆರಿಕಾ ಹಿರಿಯ ಪ್ರಜೆಗಳ ನಂಬರ್ ಪಡೆದು ಅವರಿಗೆ ನಿಮ್ಮದು ಪಾರ್ಸೆಲ್ ಇದೆ ಅಂತಾ ಕರೆ ಮಾಡುತ್ತಿದ್ದರು. ತಾವು ಏನು ಆರ್ಡರ್ ಮಾಡಿಲ್ಲ ಅಂದಾಗ ನಿಮ್ಮ ಹೆಸರಿನಲ್ಲಿ ಮುಂಚೆ ಆರ್ಡರ್ ಆಗಿದೆ ಅದನ್ನ ಕ್ಯಾನ್ಸಲ್ ಮಾಡಬೇಕು ಅಂದರೆ ಒಂದು ಮೆಸೇಜ್ ಬರುತ್ತೆ ಅದರಲ್ಲಿರುವ ನಂಬರ್‌ಗೆ ಕರೆ ಮಾಡಿ ಮಾತನಾಡುವಂತೆ ಹೇಳುತ್ತಾರೆ. ಇದನ್ನ ನಂಬಿ ಮೆಸೇಜ್‌ನಲ್ಲಿ ಬಂದ ನಂಬರ್ ಗೆ ಕರೆ ಮಾಡಿದಾಗ ಅದನ್ನ ಪಕ್ಕದಲ್ಲಿದ್ದ ಯುವಕ ಅಟೆಂಡ್ ಮಾಡುತ್ತಿದ್ದ.

ಮೊದಲು ಸೈಬರ್ ವಂಚನೆ ಆಗುತ್ತವೆ ಹುಷಾರಾಗಿರಿ. ನೀವು ಆರ್ಡರ್ ಮಾಡದಿದ್ದರೂ ನಿಮ್ಮ ಹೆಸರಿಗೆ ಪಾರ್ಸೆಲ್ ಬಂದಿದೆ ಎಂದರೆ ಯಾರೋ ನಿಮ್ಮ ಅಕೌಂಟ್ ಹ್ಯಾಕ್ ಮಾಡಲಿದ್ದಾರೆ. ನಿಮ್ಮ ಖಾತೆಯಲ್ಲಿರುವ ಹಣವನ್ನ ಕೂಡಲೇ ಗಿಫ್ಟ್ ಓಚರ್ ಪಡೆದುಕೊಳ್ಳಿ ಅಂತಾ ಹೇಳುತ್ತಾರೆ. ಇವರ ಮಾತು ನಂಬಿ ಗಿಫ್ಟ್ ಓಚರ್ ತಂದು ಮತ್ತೆ ಇವರಿಗೆ ಕರೆ ಮಾಡಿದಾಗ ಅದನ್ನ ಸ್ಕ್ಯಾಚ್ ಮಾಡಿಸಿ ಅದರಲ್ಲಿದ್ದ ನಂಬರ್ ಪಡೆದು ಅಮೆರಿಕಾದಲ್ಲಿರುವ ಇವರ ತಂಡಕ್ಕೆ ಆ ನಂಬರ್ ಕೊಟ್ಟು ಅಲ್ಲಿಂದ ಹಣ ಎಗರಿಸುವ ಕೆಲಸ ಮಾಡುತ್ತಿದ್ದರು. ಈ ರೀತಿ ನಿತ್ಯ ನೂರು ಕಾಲ್ ಮಾಡಿ ಕೋಟ್ಯಂತರ ಡಾಲರ್ ವಂಚನೆ ಮಾಡಿದ್ದು, ಇದೀಗ ಎಲ್ಲರೂ ಅರೆಸ್ಟ್ ಆಗಿದ್ದಾರೆ. ಮಿಡಿಯೇಟರ್ ಆಗಿದ್ದ ಕಿಂಗ್‌ಪಿನ್‌ನನ್ನು ಬೆಳಗಾವಿಗೆ ಕರೆದುಕೊಂಡು ಬಂದಿದ್ದ ರೆಸಾರ್ಟ್ ಮಾಲೀಕ ತೌಸೀಫ್ ಕೂಡ ಅರೆಸ್ಟ್ ಆಗಿದ್ದಾನೆ.

ಸದ್ಯ ಪ್ರಕರಣದ ಬೆನ್ನುಬಿದ್ದಿರುವ ಸೈಬರ್ ಪೊಲೀಸರು ಇದರಲ್ಲಿ ಮತ್ತೆ ಯಾರೆಲ್ಲ ಭಾಗಿಯಾಗಿದ್ದಾರೆಂದು ಶೋಧ ಮುಂದುವರೆಸಿದ್ದಾರೆ. ಇನ್ನೊಂದು ಕಡೆ ಸಿಐಡಿ ತಂಡಕ್ಕೆ ಕೇಸ್ ಹಸ್ತಾಂತರವಾಗಿದ್ದು, ಇನ್ನು ಮುಂದೆ ಸಿಐಡಿ ಅಧಿಕಾರಿಗಳು ತನಿಖೆ ನಡೆಸಲಿದ್ದಾರೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.